ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 55 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 04-09-2026 ಪುಟ : 04 ಬೆಲೆ : 2-00

# ದೇಶದ ಆರ್ಥಿಕ ಬೆಳವಣಿಗೆ ಜಗತ್ತಿಗೆ ವಿಶ್ವಾಸ

ಬೆಲ್ಜಿಯಂ: ಪ್ರಧಾನಿ ನರೇಂದ್ರ ಮೋದಿ ಗುರುವಾರ ಬೆಲ್ಜಿಯಂ ಪ್ರಧಾನಿ ಬಾರ್ಟ್ ಡಿ ವೆವರ್ ಅವರೊಂದಿಗೆ ನಡೆಸಿದ ಮಾತುಕತೆಗಳ ನಂತರ, ಭಾರತ ಮತ್ತು ಬೆಲ್ಜಿಯಂ ವ್ಯಾಪಾರ, ರಕ್ಷಣೆ, ನಿರ್ಣಾಯಕ ಖನಿಜಗಳು, ಶುದ್ಧ ಇಂಧನ ಮತ್ತು ತಂತ್ರಜ್ಞಾನಗಳಲ್ಲಿ ಸಹಕಾರವನ್ನು ವಿಸ್ತರಿಸಲು ಒಪ್ಪಿವೆ.

ಮಾತುಕತೆಗಳ ಬಳಿಕ ಬಿಡುಗಡೆ ಮಾಡಲಾದ ತಮ್ಮ ಮಾಧ್ಯಮ ಹೇಳಿಕೆಯಲ್ಲಿ, ಮೋದಿ ಅವರು ಕಳೆದ ತ್ರೈಮಾಸಿಕದಲ್ಲಿ ಭಾರತದ ಶೇ. 7.8 ರಷ್ಟು ಆರ್ಥಿಕ ಬೆಳವಣಿಗೆಯನ್ನು ಎತ್ತಿ ತೋರಿಸಿದರು ಮತ್ತು ದೇಶದ ಏರಿಕೆಯನ್ನು ವಿಶ್ವಕ್ಕೆ ವಿಶ್ವಾಸ ಮತ್ತು ಹೊಸ ಅವಕಾಶಗಳ ಮೂಲವಾಗಿದೆ ಎಂದು ಹೇಳಿದ್ದಾರೆ.

ಭಾರತ-ಯುರೋಪಿಯನ್ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ತೀರ್ಮಾನವನ್ನು ಬೆಲ್ಜಿಯಂ ಪ್ರಧಾನಿ ಪ್ರಮುಖ ಮೈಲಿಗಲ್ಲು ಎಂದು ಬಣ್ಣಿಸಿದರು ಮತ್ತು ನವದೆಹಲಿ



ಮತ್ತು ಬ್ರಸೆಲ್ಸ್ ಹಿಂದೆಂದಿಗಿಂತಲೂ ವಿಶಾಲ ಮತ್ತು ಹೆಚ್ಚು ಕಾರ್ಯತಂತ್ರದ ಸಂಬಂಧವನ್ನು ನಿರ್ಮಿಸುತ್ತಿವೆ ಎಂದು ಹೇಳಿದರು.

"ಇಂದು, ಜಗತ್ತು ದೊಡ್ಡ ಕ್ರಾಂತಿಯ ಅವಧಿಯ ಮೂಲಕ ಸಾಗುತ್ತಿದೆ. ಪ್ರಪಂಚದ ಹಲವು ಭಾಗಗಳಲ್ಲಿ ಸಂಘರ್ಷಗಳು ಮುಂದುವರೆದಿವೆ. ಅದು ಆಹಾರ, ಇಂಧನ ಅಥವಾ ಪೂರೈಕೆ ಸರಪಳಿಗಳಾಗಿರಲಿ, ಪ್ರತಿಯೊಂದು ವಲಯವು ಅನಿಶ್ಚಿತತೆಯಿಂದ ಪ್ರಭಾವಿತವಾಗಿದೆ" ಎಂದು ಮೋದಿ

2ನೇ ಪುಟಕ್ಕೆ...

## ಚಂದ್ರನ ಮೇಲೆ ಮನೆ ಕಟ್ಟಲಿದೆ ಭಾರತ



ಭಾರತವು ಬಾಹ್ಯಾಕಾಶ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲುಗಳನ್ನು ಸ್ಥಾಪಿಸಲು ಸಜ್ಜಾಗಿದೆ. ಚಂದ್ರ ಮತ್ತು ಮಂಗಳ ಗ್ರಹಗಳ ಮೇಲೆ ಮಾನವರು ವಾಸಿಸಲು ಅನುಕೂಲವಾಗುವಂತೆ ವಸತಿ ನಿರ್ಮಿಸುವ ಮಹತ್ವಾಕಾಂಕ್ಷೆಯ ಯೋಜನೆಯೊಂದನ್ನು ಬೆಂಗಳೂರಿನ ಪ್ರತಿಷ್ಠಿತ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ್ದಾರೆ. ಭೀಮ್ ಎಂದು ಹೆಸರಿಸಲಾದ ಈ ಯೋಜನೆಯು ಬಾಹ್ಯಾಕಾಶದಲ್ಲಿ ಮಾನವ ನೆಲೆಗಳನ್ನು ಸ್ಥಾಪಿಸುವಲ್ಲಿ ಕ್ರಾಂತಿಕಾರಿಯಾಗಿದೆ. ಭಾರತೀಯ ಬಾಹ್ಯಾಕಾಶಯಾನಿ ಶುಭಾಂಶು ಶುಕ್ಲಾ ಅವರ ತಂಡ ಈ ಅದ್ಭುತ ಪರಿಕಲ್ಪನೆಯ ಹಿಂದೆ ಇದೆ. ಈ ತಂತ್ರಜ್ಞಾನವು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ಎರಡರಷ್ಟು ದೊಡ್ಡ ವಾಸಸ್ಥಳವನ್ನು ಚಂದ್ರನ ಮೇಲೆ ನಿರ್ಮಿಸಲು ಸಹಕಾರಿಯಾಗಿದೆ.

## ಸಾಹುಕಾರ್ ಶಿವಶಂಕರಪ್ಪಗೆ ಹೈಕೋರ್ಟ್ ಛೀಮಾರಿ




ಬೆಂಗಳೂರು: ಭ್ರಷ್ಟರನ್ನು ನೇಮಿಸಿ ಒಳ್ಳೆಯ ಆಡಳಿತ ನೀಡಲು ಸಾಧ್ಯಾನಾ ಎಂದು ಮಾಜಿ ಕೆಪಿಎಸ್‌ಸಿ ಅಧ್ಯಕ್ಷ ಸಾಹುಕಾರ್ ಶಿವಶಂಕರಪ್ಪಗೆ ಹೈಕೋರ್ಟ್ ಛೀಮಾರಿ ಹಾಕಿದೆ.

ಕೆಪಿಎಸ್‌ಸಿ ನೇಮಕಾತಿ ಹಗರಣ ಪ್ರಕರಣ ಸಂಬಂಧ ಸಾಹುಕಾರ್ ಶಿವಶಂಕರಪ್ಪ ಅವರು ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ನ್ಯಾಯಮೂರ್ತಿ ವಿಶ್ವಜೀತ್ ಶೆಟ್ಟಿ ಪೀಠ ವಿಚಾರಣೆ ನಡೆಸಿತು. ಈ ವೇಳೆ ಸಾಹುಕಾರ್ ಶಿವಶಂಕರಪ್ಪ ಪರವಾಗಿ ವಾದಿಸಿದ ಹಿರಿಯ ವಕೀಲ ಅರುಣ್ ಶ್ಯಾಮ್, ಪ್ರಕರಣದಲ್ಲಿ ನಮ್ಮ ಕಕ್ಷಿದಾರರ ಪಾತ್ರ ಏನು ಇಲ್ಲ. ಎಲ್ಲವನ್ನೂ ಪರೀ

2ನೇ ಪುಟಕ್ಕೆ...

## ಹಾಲಿನ ಟ್ಯಾಂಕರ್ ಪಲ್ಟಿ ಹಾಲು ರಸ್ತೆಪಾಲು




ಬೆಂಗಳೂರು: ಕೆಎಂಎಫ್ ನಂದಿನಿ ಹಾಲಿನ ಟ್ಯಾಂಕರ್ ಪಲ್ಟಿಯಾದ ಪರಿಣಾಮ 14 ಸಾವಿರ ಲೀಟರ್ ಹಾಲು ರಸ್ತೆಯಲ್ಲಿ ಹರಿದ ಘಟನೆ ಹೆಬ್ಬಾಳ ಸಮೀಪ ನಡೆದಿದೆ.

ಕೆಎಂಎಫ್‌ಗೆ ಹೊರಟಿದ್ದ ಹಾಲಿನ ಟ್ಯಾಂಕರ್ ಹೆಬ್ಬಾಳ ಸಮೀಪ ಸರ್ವಿಸ್ ರಸ್ತೆಯಲ್ಲಿ ಪಲ್ಟಿಯಾಗಿದೆ. ಟ್ಯಾಂಕರ್ ಮುಚ್ಚಳ ಮುಚ್ಚಲು ಸಾರ್ವಜನಿಕರು ಪರದಾಡಿದ್ದಾರೆ. ಇನ್ನೂ ಕೆಲವರು ನೀರಿನ ಬಾಟಲಿಯಲ್ಲಿ ಹಾಲು ತುಂಬಿಕೊಂಡಿದ್ದಾರೆ.

2ನೇ ಪುಟಕ್ಕೆ...

## ಉದ್ಯಾನ ಭೂಮಿ ಬಳಕೆ ಮಸೂದೆ ವಾಪಾಸ್



ಬೆಂಗಳೂರು: ಸಾರ್ವಜನಿಕರು, ಪರಿಸರವಾದಿಗಳು ಹಾಗೂ ವಿರೋಧ ಪಕ್ಷಗಳ ತೀವ್ರ ಆಕ್ಷೇಪದ ಹಿನ್ನೆಲೆಯಲ್ಲಿ, ವಿವಾದಕ್ಕೆ ಕಾರಣವಾಗಿದ್ದ ಕರ್ನಾಟಕ ಸರ್ಕಾರಿ ಉದ್ಯಾನವನಗಳ ಸಂರಕ್ಷಣೆ (ತಿದ್ದುಪಡಿ) ಮಸೂದೆಯನ್ನು ಹಿಂಪಡೆಯಲು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. 1975ರ ಕರ್ನಾಟಕ ಸರ್ಕಾರಿ ಉದ್ಯಾನಗಳ (ಸಂರಕ್ಷಣೆ) ಕಾಯ್ದೆಗೆ ತಿದ್ದುಪಡಿ ತಂದು, ಉದ್ಯಾನವನಗಳ ಒಟ್ಟು ವಿಸ್ತೀರ್ಣದಲ್ಲಿ ಶೇ. 5ರಷ್ಟು ಭೂಮಿಯನ್ನು ಸಾರ್ವಜನಿಕ ಮೂಲಸೌಕರ್ಯ ಯೋಜನೆಗಳಿಗೆ ಬಳಸಿಕೊಳ್ಳಲು ಸರ್ಕಾರ ಉದ್ದೇಶಿಸಿತ್ತು. ವಿಧಾನಸಭೆಯಲ್ಲಿ ಚರ್ಚೆಯಿಲ್ಲದೆ ಅಂಗೀಕಾರಗೊಂಡಿದ್ದ ಈ ಮಸೂದೆಗೆ ಸಾರ್ವಜನಿಕ ವಲಯದಿಂದ ಭಾರೀ ವಿರೋಧ ವ್ಯಕ್ತವಾಗಿತ್ತು. ಈ ಮಸೂದೆಗೆ ಭಾರೀ ವಿರೋಧ ವ್ಯಕ್ತವಾದ ಬೆನ್ನಲ್ಲೇ ಇಂದು ಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ

2ನೇ ಪುಟಕ್ಕೆ...

# ಸೆ.21ರಿಂದ ವಿಶೇಷ ಅಧಿವೇಶನ

ಬೆಂಗಳೂರು: ಸೆ.21ರಿಂದ ಮತ್ತೆ ಮೂರು ದಿನಗಳ ಕಾಲ ವಿಶೇಷ ಅಧಿವೇಶನ ನಡೆಸಲು ಸಚಿವ ಸಂಪುಟದಲ್ಲಿ ಒಪ್ಪಿಗೆ ನೀಡಲಾಗಿದೆ.

ಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ವಿಶೇಷ ಅಧಿವೇಶನಕ್ಕೆ ಒಪ್ಪಿಗೆ ನೀಡಲಾಗಿದೆ. ಸೆಪ್ಟೆಂಬರ್ 21ರಿಂದ ಸೆಪ್ಟೆಂಬರ್ 23ರವರೆಗೆ ಒಟ್ಟು ಮೂರು ದಿನಗಳ ಕಾಲ ವಿಶೇಷ ಅಧಿವೇಶನ ನಡೆಯಲಿದೆ.



ಈ ಮೊದಲು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣದಲ್ಲಿ ಸಚಿವ ನಾಗೇಂದ್ರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಹೋರಾಟ ಮುಂದುವರೆಸಿತ್ತು. ಅಲ್ಲದೇ ಅಹೋರಾತ್ರಿ ಧರಣಿಗೂ ಸಿದ್ಧತೆ ನಡೆಸಿತ್ತು. ಈ ಮಧ್ಯೆಯೇ ಮೂರು ದಿನ ಮೊದಲೇ ವಿಧಾನಮಂಡಲದ ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಿಕೆ ಮಾಡಲಾಗಿತ್ತು. ಇದೀಗ ಮತ್ತೆ ಮೂರು ದಿನಗಳ ಕಾಲ ವಿಶೇಷ ಅಧಿವೇಶನ ನಡೆಯಲಿದ್ದು, ಕಸ್ತೂರಿ ರಂಗನ್ ವರದಿ ಹಾಗೂ ಬರದ ಬಗ್ಗೆ ಚರ್ಚೆ ನಡೆಯಲಿದೆ.

## ಪಥಸಂಚಲನದಲ್ಲಿ ಭಾಗಿ ಇಬ್ಬರು ಶಿಕ್ಷಕರಿಗೆ ರಿಲೀಫ್



ಕಲಬುರಗಿ : ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗಿಯಾಗಿದ್ದಾರೆ ಎಂಬ ಆರೋಪದಡಿ ಇಬ್ಬರು ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಅಮಾನತುಗೊಳಿಸಿದ್ದ ಆದೇಶಕ್ಕೆ ಕಲಬುರಗಿ ಕೆಎಟಿ (ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ) ತಡೆ ನೀಡಿದೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಶಿಕ್ಷಕರಾದ ಗುರುರಾಜ್ ಜೋಷಿ ಹಾಗೂ ಅಣ್ಣಾ ಸಾಹೇಬ್ ದೇಶಮುಖ ಅವರ ಅಮಾನತು ಆದೇಶಕ್ಕೆ ಕೆಎಟಿ ತಡೆಯಾಜ್ಞೆ ನೀಡಿದೆ.

ಕಳೆದ 2025ರ ಅಕ್ಟೋಬರ್ 10ರಂದಯ

2ನೇ ಪುಟಕ್ಕೆ...

## ಸಿಎಂ ರೇವಂತ್ ರೆಡ್ಡಿ ಸಂಪುಟದಿಂದ ಸುರೇಖಾ ದಿಢೀರ್ ವಜಾ



ಹೈದರಾಬಾದ್: ತೆಲಂಗಾಣ ಸಚಿವೆ ಕೊಂಡಾ ಸುರೇಖಾ ಅವರನ್ನು ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರು ತಕ್ಷಣದಿಂದ ಜಾರಿಗೆ ಬರುವಂತೆ ಸಚಿವ ಸಂಪುಟದಿಂದ ಕೈಬಿಟ್ಟಿದ್ದಾರೆ. ಈ ಕುರಿತು ರಾಜ್ಯಪಾಲರಿಗೆ ಪತ್ರ ರವಾನಿಸಿದ್ದಾರೆ ಎಂದು ವರದಿಯಾಗಿದೆ. ಸುರೇಖಾ ಅವರು

2ನೇ ಪುಟಕ್ಕೆ...

## ಕಸ್ತೂರಿ ರಂಗನ್ ವರದಿ ವಿರೋಧಿಸಿ ಸಾಗರದಲ್ಲಿ ಪಶ್ಚಿಮ ಘಟ್ಟ ರೈತ ಸಹಕಾರ ವೇದಿಕೆಯಿಂದ ಬೃಹತ್ ಪಾದಯಾತ್ರೆ

ಶಿವಮೊಗ್ಗ ಕಸ್ತೂರಿ ರಂಗನ್ ವರದಿ ವಿರೋಧಿಸಿ ಪಶ್ಚಿಮ ಘಟ್ಟ ರೈತ ಸಹಕಾರ ವೇದಿಕೆಯಿಂದ ಪಾದಯಾತ್ರೆ ಸಾಗರದಲ್ಲಿ ನಡೆದಿದೆ. ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನ ಆವಿನಹಳ್ಳಿ ಗ್ರಾಮದಿಂದ ಸಾಗರದವರೆಗೂ ಪಾದಯಾತ್ರೆ ನಡೆಸಿರುವ ಹೋರಾಟಗಾರರು, ಕಸ್ತೂರಿ ರಂಗನ್ ವರದಿ ಮಾರ್ಪಾಡು ಮಾಡುವಂತೆ ಆಗ್ರಹಿಸಿದ್ದಾರೆ.



## ಶಾಸಕರ ಬಾಲಿಷ ಹೇಳಿಕೆಗೆ ಮಾಡಾಳ್ ತಿರುಗೇಟು



ಚನ್ನಗಿರಿ : ಪಟ್ಟಣದ ಮುಖ್ಯ ಬಸ್ ನಿಲ್ದಾಣದ ಅಧುನೀಕರಣದ ಕಾಮಗಾರಿ ಕೆಲಸ ಪ್ರಾರಂಭಗೊಂಡು 7ತಿಂಗಳು ಕಳೆಯುತ್ತಿದ್ದು ಕಾಮಗಾರಿ ಆಮೆ ಗತಿಯಲ್ಲಿ ಸಾಗುತ್ತಿರುವುದು ಯಾತಕ್ಕಾಗಿ ಅಧುನೀಕರಣಕ್ಕೆ ಬೇಕಾದ ಅನುಧಾನವನ್ನು ಈ ಹಿಂದೆ ನಾನು ಶಾಸಕನಾಗಿದ್ದಾಗಲೇ ಸರ್ಕಾರದಿಂದ ಮಂಜೂರು ಮಾಡಿಸಿದ್ದರು ಸಹಾ ಈ ಕಾಮಗಾರಿಯನ್ನು ಪೂರ್ಣಗೊಳಿಸದೆ ವಿಳಂಭ ಮಾಡುತ್ತೀರುವುದು ಯಾರನ್ನು ಮೆಚ್ಚಿಸಲು ಎಂದು ಮಾಜಿ ಶಾಸಕ ಮಾಡಾಳು ವಿರೂಪಾಕ್ಷಪ್ಪ ಪುರಸಭೆಯ ಮುಖ್ಯಾಧಿಕಾರಿಗಳನ್ನು ಪ್ರಶ್ನಿಸಿದರು. ಅವರು ಗುರುವಾರ ಇಲ್ಲಿನ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಮುಖ್ಯ ಬಸ್ ನಿಲ್ದಾಣದ ಅಧುನೀಕರಣದ ಕಾಮಗಾರಿ ಕೆಲಸಕ್ಕೆ ನಾನು ಶಾಸಕ ನಾಗಿದ್ದ 2022ರಲ್ಲಿ ಎಸ್.ಎಫ್.ಸಿ ಯೋಜನೆಯಲ್ಲಿ ನಿಲ್ದಾಣದ ಅಭಿವೃದ್ದಿಗೆ 90ಲಕ್ಷ ಸರ್ಕಾರದಿಂದ ಮಂಜೂರಾತಿ ಮಾಡಿಸಿ ಮತ್ತು ಪಟ್ಟಣದ ಇತ-ರೆ ಕಾಮಗಾರಿಗಳಿಗೆ ಹಣ ಮಂಜೂರು ಮಾಡಿದ್ದನ್ನು ಸೇರಿಸಿಕೊಂಡು 1.34ಕೋಟಿ ಹಣದಲ್ಲಿ ಅಧುನೀಕರಣ ಆಮೆ ಗತಿಯಲ್ಲಿ ಸಾಗುತ್ತಿದ್ದು ಈ ಹಣವು ಸಾಕಾಗದೆ ನಿಲ್ದಾಣದ ನೆಲಹಾಸು ಹಾಕಲು ಹಣ ಬೇಕಾಗಿದೆ

2ನೇ ಪುಟಕ್ಕೆ...

## ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿ ಅನುಮಾನಾಸ್ಪದ ಸಾವು ಕೊಲೆ ಆರೋಪ ಮಾಡಿದ ಪೋಷಕರು

ದಾವಣಗೆರೆ: ಇಲ್ಲಿನ ಕಾಲೇಜೊಂದರ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿಯೊಬ್ಬಳ ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ.

ಹೂವಿನ ಹಡಗಲಿ ತಾಲೂಕಿನ ಕುರುವತ್ತಿ ಗ್ರಾಮದ ರಂಜಿತಾ (17) ಅನುಮಾನಾಸ್ಪದವಾಗಿ ಸಾವನ್ನಪ್ಪಿದ ವಿದ್ಯಾರ್ಥಿನಿ. ಈಕೆ ದಾವಣಗೆರೆಯ ಟೀಮ್ ಅಕಾಡೆಮಿಯಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದಳು. ಕಳೆದ ಒಂದುವರೆ ವರ್ಷದಿಂದ ಇಲ್ಲೇ ವಿದ್ಯಾಭ್ಯಾಸ ಮಾಡುತ್ತಿದ್ದಳು ಎಂದು ತಿಳಿದುಬಂದಿದೆ.

ಸೆ.2ರ ರಾತ್ರಿ ಹಾಸ್ಟೆಲ್‌ನ ಕಿಟಕಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಬಾಲಕಿಯ ಶವ ಪತ್ತೆಯಾಗಿದೆ. ಪೋಷಕರು ಅಕಾಡೆಮಿ ವಿರುದ್ಧ ಹೊಡೆದು ಕೊಲೆ ಮಾಡಿ ನೇಣು ಹಾಕಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಸಂಬಂಧ ಟೀಮ್ ಅಕಾಡೆಮಿ ವಿರುದ್ಧ ವಿದ್ಯಾ ನಗರ ಪೊಲೀಸ್ ಠಾಣೆಗೆ ಪೋಷಕರು ದೂರು ನೀಡಿ-ದ್ದಾರೆ. ಪೋಷಕರು ನೀಡಿದ ದೂರಿನ ಅನ್ವಯ ಪ್ರಕರಣ ದಾಖಲಾಗಿದೆ.

## ಬೆಂಗಳೂರು ಇಸ್ಕಾನ್‌ನಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಸಂಭ್ರಮ



ಬೆಂಗಳೂರು: ವೆಸ್ಟ್ ಆಫ್ ಕಾರ್ಡ್ ರಸ್ತೆಯಲ್ಲಿರುವ ಇಸ್ಕಾನ್‌ನ ದೇವಸ್ಥಾನದಲ್ಲಿ ಇಂದಿನಿಂದ ಶ್ರೀ ಕೃಷ್ಣ ಜನ್ಮಾಷ್ಟಮಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡಿದ್ದು, ಸಾವಿರಾರು ಭಕ್ತರು ದೇವಸ್ಥಾನಕ್ಕೆ ಆಗಮಿಸಿ ಕೃಷ್ಣನ ದರ್ಶನ ಪಡೆಯುತ್ತಿದ್ದಾರೆ.

ಹಬ್ಬದ ದಿನಗಳಲ್ಲಿ ವಿಶೇಷ ಮಹಾ ಅಭಿಷೇಕ, ಮಹಾಮಂಗಳಾರತಿ, 56 ಬಗೆಯ ಖಾದ್ಯಗಳ ಚಪ್ಪನ್ ಭೋಗ್' ಪ್ರಿಯವಾದ ಮಖನ್ ಮಿಶ್ರಿ (ಬೆಣ್ಣೆ-ಸಕ್ಕರೆ) ನೈವೇದ್ಯ, ಪುಷ್ಪಾಂಜಲಿ ಸೇವೆ, ಭವ್ಯ ಪಲ್ಲಕ್ಕಿ ಉತ್ಸವ ಹಾಗೂ ಜುಲನ್ ಸೇವೆ (ಜೋಕಾಲಿ ಸೇವೆ)ಗಳು ನೆರವೇರಲಿವೆ. ಇಂದಿನಿಂದ ಸೆ.5 ರವರೆಗೆ ಮೂರು ದಿನಗಳ ಕಾಲ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಅತ್ಯಂತ ವೈಭವದಿಂದ ಆಚರಿಸಲಾಗುತ್ತದೆ.

ಗೋ ಪೂಜೆ, ಕೋಟಿ ಜಪ ಯಜ್ಞ, ಭಗವದ್ಗೀತಾ ಪಾರಾಯಣ, ಖ್ಯಾತ ಕಲಾವಿದರಿಂದ ನೃತ್ಯ-ಸಂಗೀತ ಕಾರ್ಯಕ್ರಮಗಳು ಹಾಗೂ ಮಕ್ಕಳಿಂದ ಶ್ಲೋಕ ಪಠಣಗಳು ಜರುಗಲಿವೆ. ಪೋಷಕರು ತಮ್ಮ ಪುಟ್ಟ ಮಕ್ಕಳಿಗೆ ರಾಧಾ-ಕೃಷ್ಣರ ವೇಷ ಧರಿಸಿ ಪಾಲ್ಗೊಳ್ಳಲು ಆನ್‌ಲೈನ್ ವೇಷಭೂಷಣ ಸ್ಪರ್ಧೆ ಆಯೋಜಿಸಲಾಗಿದೆ. ಮನೆಯಲ್ಲೇ ಕುಳಿತು ಸಂಭ್ರಮಿಸುವ ಭಕ್ತರಿಗಾಗಿ ಸೆಪ್ಟೆಂಬರ್ 4ರಂದು ರಾತ್ರಿ 8:00 ಗಂಟೆಗೆ ಸ್ವಾಗತಂ ಕೃಷ್ಣ ಎಂಬ ಡಿಜಿಟಲ್ ಕಾರ್ಯಕ್ರಮ ನೇರಪ್ರಸಾರವಾಗಲಿದೆ. ಇದರಲ್ಲಿ ಭಕ್ತಿ ಸಂಗೀತ, ಪ್ರವಚನ, ವಿಶೇಷ ಅಭಿಷೇಕ ಮತ್ತು ಲೈವ್ ಕ್ವಿಜ್ ಸ್ಪರ್ಧೆಗಳಿರಲಿದ್ದು, ವೀಕ್ಷಕರು ಆಕರ್ಷಕ ಬಹುಮಾನಗಳನ್ನು ಗೆಲ್ಲಬಹುದಾಗಿದೆ.

ವೈಟ್‌ಫೀಲ್ಡ್‌ನ ಕೆಟಿಪಿಒ ಆವರಣದಲ್ಲಿ ನಡೆಯುವ

2ನೇ ಪುಟಕ್ಕೆ...

ಒಂದನೇ ಪುಟದಿಂದ..

# ರಾಹುಲ್‌ನ್ನನ್ನು ರಾಜಕೀಯವಾಗಿ ಮುಗಿಸುವ ಸಂಚು: ಕೇಂದ್ರದ ವಿರುದ್ಧ ಸಿಡಿದ ಸಿದ್ರಾಮಯ್ಯ



ಮಾಡಿದ್ದಾರೆ. ಸಂವಿಧಾನ ಅಸ್ಪೃಶ್ಯತೆಯನ್ನ ರದ್ದು ಮಾಡಿದೆ. ಆದ್ರೆ ದೇಶಕ್ಕೆ ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದ್ದರೂ ಈ ರೀತಿ ಮಾಡಿರೋದು ಸಂವಿಧಾನದ ಆಶಯ ವಿರೋಧ ಮಾಡಿದಂತೆ. ಇದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತ್ರ ಮಾಡಿದ ಅಪಮಾನವಲ್ಲ, ದಲಿತ ಸಮುದಾಯಕ್ಕೆ ಮಾಡಿದ ಅಪಮಾನ. ರಾಹುಲ್ ಗಾಂಧಿ ಏನು ತಪ್ಪು ಮಾಡಿದ್ದಾರೆ? ಇದರ ವಿರುದ್ಧ ನಾವೆಲ್ಲ ಪ್ರತಿಭಟನೆ ಮಾಡಬೇಕು ಎಂದು ಕರೆ ನೀಡಿದರು.

ಉತ್ತರಾಖಂಡದವರು ಮಾಡಿದ ತಪ್ಪನ್ನ ರಾಹುಲ್ ಗಾಂಧಿ ಪ್ರಶ್ನೆ ಮಾಡಿದ್ದಾರೆ. ಕಾನೂನಿನ ಪ್ರಕಾರ ಯಾರು ಶುದ್ಧೀಕರಣ ಮಾಡಿದ್ದಾರೋ ಅವರ ವಿರುದ್ಧ ಎಸ್ಸಿ –ಎಸ್ಟಿ ಕಾಯ್ದೆ ಅಡಿಯಲ್ಲಿ ಕೇಸ್ ದಾಖಲಿಸಬೇಕು. ಆದ್ರೆ ಯಾವ ತಪ್ಪು ಮಾಡದ ರಾಹುಲ್ ಗಾಂಧಿ ಮೇಲೆ ಎಫ್‌ಐಆರ್ ದಾಖಲಿಸಿದ್ದಾರೆ. ರಾಹುಲ್ ಗಾಂಧಿ ಸಂವಿಧಾನದ ಪರ ಇರುವವರು, ಅಸ್ಪೃಶ್ಯತೆಯ ವಿರುದ್ಧ ಇರುವವರು ಎಂದು ಹೇಳಿದರು.

ರಾಹುಲ್ ಗಾಂಧಿ ಅವರ ಬಾಯಿ ಮುಚ್ಚಿಸಲು ಹೀಗೆ ಮಾಡಿದ್ದಾರೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಹೇಗಾದ್ರೂ ಮಾಡಿ ರಾಹುಲ್ ಗಾಂಧಿ ಅವರನ್ನ ರಾಜಕೀಯವಾಗಿ ಮುಗಿಸಬೇಕೆಂದು ಸಂಚು ಮಾಡಿದೆ. ಈ ಹಿಂದೆಯೂ ಲೋಕಸಭೆಯಲ್ಲಿ ಕೇಂದ್ರ ಸರ್ಕಾರವನ್ನ ಟೀಕಿಸಿದ್ದಾಗ ಲೋಕಸಭೆಗೆ ರಾಹುಲ್ ಗಾಂಧಿ ಬರದಂತೆ ಮಾಡಲು ಅವರ ಸದಸ್ಯತ್ವವನ್ನೇ ರದ್ದು ಮಾಡಿದ್ರು. ಸುಪ್ರೀಂ ಕೋರ್ಟ್‌ನಲ್ಲಿ ಹೋಗಿ ರಾಹುಲ್ ಗಾಂಧಿ ಅವರು ಸದಸ್ಯತ್ಯ ವಾಪಸ್ ಪಡೆದುಕೊಳ್ಳಬೇಕಾಯ್ತು. ಇಂತಹ ಕಾನೂನು ಬಾಹಿರ ಕ್ರಮವನ್ನ ಕೇಂದ್ರ ಸರ್ಕಾರ ಮಾಡುತ್ತಾ ಬಂದಿದೆ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಅಧಿಕಾರದಲ್ಲಿರಲು ನಾಲಾಯಕ್, ಕೇಂದ್ರದಲ್ಲಿ ಸಂವಿಧಾನ ವಿರೋಧಿ ಸರ್ಕಾರ ಇದೆ. ರಾಹುಲ್ ಗಾಂಧಿ ಅವರ ವಿರುದ್ಧ ಈಗ ಹಾಕಿರುವ ಕೇಸ್ ಸಹಿಸಲು ಆಗಲ್ಲ. ದಲಿತರ ಹಕ್ಕು, ಸಂವಿಧಾನದಲ್ಲಿಕೊಟ್ಟ ಹಕ್ಕು. ಶುದ್ಧೀಕರಣ ಕೆಲಸವನ್ನ ಮನುವಾದಿಗಳು ಮಾಡಿದ್ದಾರೆ. ನಾವೆಲ್ಲ ಒಟ್ಟಾಗಿ ಸೇರಿ ಇದನ್ನ ಖಂಡಿಸಬೇಕು. ಜಿಲ್ಲಾ ಹಾಗೂ ತಾಲೂಕಿನ ಮಟ್ಟದಲ್ಲಿ ಪ್ರತಿಭಟನೆ ಮಾಡಬೇಕು. ಏಕೆಂದ್ರೆ ಬಿಜೆಪಿಗರು ಸಂವಿಧಾನದ ವಿರೋಧಿಗಳು, ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ. ಬಿಜೆಪಿ ಮಾಡಿದ್ದು ಅಕ್ಷಮ್ಯ ಅಪರಾಧ ಇದರ ವಿರುದ್ಧ ನಾವೆಲ್ಲ ಒಗ್ಗಟ್ಟಾಗಿ ಪ್ರತಿಭಟಿಸಬೇಕು ಎಂದು ಕರೆ ಕೊಟ್ಟರು.

# ದುಡ್ಡು–ಬ್ಲಡ್ಡು ಸರ್ಕ್ಯುಲೇಟ್ ಆಗ್ತಿರಬೇಕು ಸಿಎಂ ಡಿ.ಕೆ. ಶಿವಕುಮಾರ್



ಮತ್ತು ಸಮಾಜದ ಎಲ್ಲಾ ವರ್ಗದ ಜನರ ಆರ್ಥಿಕ ಶಕ್ತಿ ಬಲವರ್ಧನೆಗೆ ಸಹಾಯವಾಗಿದೆ ಎಂದರು.

ನಾನು ಬಾಲಗಂಗಾಧರನಾಥ ಸ್ವಾಮೀಜಿಗಳ 50ನೇ ಜನ್ಮದಿನಾಚರಣೆ ಕಾರ್ಯಕ್ರಮಕ್ಕೆ ಹೋಗಿದ್ದಾಗ

ಮಾಲೀಕನಾಗುವುದು ಒತ್ತಡದ, ಸವಾಲಿನ ಕೆಲಸ, ಸರ್ಕಾರ ಎಫ್ ಕೆಸಿಸಿಐ ಜೊತೆ ನಿಲ್ಲುತ್ತದೆ ಎಂದರು. ರಾಮಾಯಣದಲ್ಲಿ ಸೀತೆಯ ಪಾತ್ರ ಹೆಚ್ಚು ಮಹತ್ವದ್ದು, ಆಕೆಯ ಹೋರಾಟ, ತ್ಯಾಗ, ಪರಿಶುದ್ಧತೆ ನಿಜಕ್ಕೂ ಅದ್ಬುತ, ಭಾರತದಲ್ಲಿ ಮೊದಲು ಹೆಣ್ಣು ದೇವತೆಗೆ ಪೂಜೆ ಮಾಡಿ ನಂತರ ದೇವರನ್ನು ಪೂಜಿಸುತ್ತೇವೆ, ಸಮಾಜದಲ್ಲಿ ಹೆಣ್ಣಿಗೆ ಅಷ್ಟು ಶಕ್ತಿಯಿದೆ, ಪೂಜನೀಯ ಭಾವನೆ ಇದೆ ಎಂದರು. ಸಮಾಜಲ್ಲಿ ಆರ್ಥಿಕತೆ ಬಲವಾಗಲು ಹಣ ಚಲನೆಯಲ್ಲಿರಬೇಕು, ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಜಾರಿಗೆ ತಂದ 5 ಗ್ಯಾರಂಟಿ ಯೋಜನೆಗಳು ಮಹಿಳೆಯರ

ಸಾಯಿಬಾಬಾ ಅವರು ನನಗೆ ಹೇಳಿದ್ದರು, ದುಡ್ಡು,ಬ್ಲುಡ್ಡು ಎರಡೂ ಸರ್ಕ್ಯುಲೇಟ್ ಆಗುತ್ತಿರಬೇಕು, ಬ್ಲಡ್ ದೇಹದಲ್ಲಿ ಒಂದು ಕಡೆ ನಿಂತುಬಿಟ್ಟರೆ ಆರೋಗ್ಯ ಸಮಸ್ಯೆಯಾಗುತ್ತದೆ, ದುಡ್ಡು ಒಂದೇ ಕಡೆ ಸಂಗ್ರಹವಾಗಿದ್ದರೆ ಆದಾಯ ತೆರಿಗೆ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ ದಾಳಿಗಳು, ಕುಡಿಕೆ ಕಳ್ಳತನ ಇತ್ಯಾದಿ ಆಗುತ್ತದೆ,ಹಣ ಯಾವತ್ತೂ ಚಲನಶೀಲನವಾಗಿರಬೇಕು, ಹಣಕಾಸು ವ್ಯವಸ್ಥೆ ಸಮಾದಲ್ಲಿ ಸರ್ಕ್ಯುಲೇಟ್ ಆಗುತ್ತಿದ್ದರೆ ದೇಶದ ಆರ್ಥಿಕ ವ್ಯವಸ್ಥೆ ಸದೃಢವಾಗುತ್ತದೆ ಎಂದರು.

# ಪಡಿತರ ಮಾನದಂಡ ಪರಿಷ್ಕರಣೆ



ನಿರ್ವಹಿಸಲಾಗುವುದು' ಎಂದು ಮಾಹಿತಿ ನೀಡಿದರು.

'ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲೂ ಇಪಿಒಎಸ್, ವಿದ್ಯುನ್ಮಾನ ತೂಕದ ಯಂತ್ರ ಮತ್ತು ಐಆರ್‌ಐಎಸ್ ಸ್ಕ್ಯಾನರ್ ಅಳವಡಿಸಲಾಗುವುದು. ಮೊದಲಿಗೆ ಪ್ರಾಯೋಗಿಕವಾಗಿ ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಿ, ನಂತರ ರಾಜ್ಯದಾದ್ಯಂತ ವಿಸ್ತರಿಸಲಾಗುವುದು' ಎಂದು ಹೇಳಿದರು.'ಬಯೊಮೆಟ್ರಿಕ್ ಜೊತೆಗೆ ಒಟಿಪಿ ಪರಿಶೀಲನಾ ವ್ಯವಸ್ಥೆ ಅಳವಡಿಕೆಗೆ ಚಿಂತಿಸಲಾಗಿದೆ. ನ್ಯಾಯಬೆಲೆ ಅಂಗಡಿಗಳ ಮಾಲೀಕರು ಗೋದಾಮುಗಳಿಂದ ಆಹಾರಧಾನ್ಯ ಎತ್ತುವಳಿ ಮಾಡಿದ ನಂತರ ಫಲಾನುಭವಿಗಳಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡುವ ವ್ಯವಸ್ಥೆ ತರಲಾಗುವುದು. ಬೆಂಗಳೂರು ನಗರದಲ್ಲಿ ವಲಸೆ ಕಾರ್ಮಿಕರಿಗೆ ಪಡಿತರವನ್ನು ಸಮರ್ಪಕವಾಗಿ ವಿತರಿಸಲು 'ಅನ್ನ ಎಟಿಎಂ' ಸ್ಥಾಪಿಸಲು ಚಿಂತನೆ ನಡೆದಿದೆ' ಎಂದು ತಿಳಿಸಿದರು.

'ನಗರದಲ್ಲಿ ಶೇ 50ರಷ್ಟು ಹಾಗೂ ಗ್ರಾಮೀಣ ಪ್ರದೇಶದಲ್ಲಿ ಶೇ 75ರಷ್ಟು ಮಂದಿ ಆಹಾರ ಭದ್ರತಾ ಕಾಯ್ದೆ ವ್ಯಾಪ್ತಿಗೆ ಬರಬೇಕಿದೆ. ಈ ನಿಟ್ಟಿನಲ್ಲಿ, ರಾಜ್ಯಕ್ಕೆ ಜನಸಂಖ್ಯೆ ಆಧರಿಸಿ ಪಡಿತರ ಹಂಚಿಕೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಪಡಿತರ ಕಾಳಸಂತೆಯಲ್ಲಿ ಮಾರಾಟ ಆಗದಂತೆ ನಿಗಾ ವಹಿಸಲಾಗುವುದು. ಸುಧಾರಣೆ ಮೂಲಕ, ಕಡಿಮೆ ಸಮಯದಲ್ಲೇ ದೊಡ್ಡ ಬದಲಾವಣೆ ತರಲು ಯೋಜಿಸಲಾಗಿದೆ' ಎಂದರು.

'ವೈದ್ಯಕೀಯ ಚಿಕಿತ್ಸೆಯ ಕಾರಣಗಳಿಗಾಗಿ, ಮಾನದಂಡದ ಪ್ರಕಾರ ಇರುವವರಿಗೆ ತ್ವರಿತವಾಗಿ ಬಿಪಿಎಲ್ ಪಡಿತರ ಚೀಟಿ ವಿತರಿಸುವಂತೆ ಸೂಚಿಸಲಾಗಿದೆ.

# ಬಿಜೆಪಿಗೆ ತಿರುಗೇಟು ನೀಡಲು ಕಾಂಗ್ರೆಸ್‌ನಿಂದ ಜನಾಂದೋಲನ ಆಕ್ರೋಶ ಯಾತ್ರೆ



ಬಳ್ಳಾರಿ: ರಾಜ್ಯ ಬಿಜೆಪಿಯ ಪಾದಯಾತ್ರೆಗೆ ಪ್ರತಿಯಾಗಿ ಜನಾಂದೋಲನ ಆಕ್ರೋಶ ಯಾತ್ರೆ ನಡೆಸಲು ಕಾಂಗ್ರೆಸ್ ಭರ್ಜರಿ ಸಿದ್ಧತೆ ನಡೆಸಿದ್ದು, ಈ ಮೂಲಕ ಬಳ್ಳಾರಿಯಲ್ಲಿ ಮತ್ತೊಂದು ಹೈವೋಲ್ಟೇಜ್ ರಾಜಕೀಯ ಯಾತ್ರೆಗೆ ವೇದಿಕೆ ಸಿದ್ಧಗೊಂಡಿದೆ.

ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆಗೆ ತಕ್ಕ ತಿರುಗೇಟು ನೀಡಲು ಕಾಂಗ್ರೆಸ್ ನಾಯಕರು ಪ್ರತಿತಂತ್ರ ರೂಪಿಸಿದ್ದಾರೆ. ಬಿಜೆಪಿ ನಾಯಕರ ಆರೋಪಗಳಿಗೆ ನೇರವಾಗಿ ಜನರ ಮುಂದೆಯೇ ಉತ್ತರ ನೀಡಲು ನಿರ್ಧರಿಸಿರುವ ಕಾಂಗ್ರೆಸ್, ಬಿಜೆಪಿ ಪಾದಯಾತ್ರೆ ಸಾಗಿದ ಮಾರ್ಗದಲ್ಲೇ 'ಜನಾಂದೋಲನ ಆಕ್ರೋಶ ಯಾತ್ರೆ'ಯನ್ನು ಸಂಘಟಿಸಲು ಮುಂದಾಗಿದೆ.

ಈ ಯಾತ್ರೆಗೆ ಅಂತಿಮ ರೂಪ ನೀಡುವ ಸಂಬಂಧ ಸ್ಥಳೀಯ ಕಾಂಗ್ರೆಸ್ ನಾಯಕರು ಪಕ್ಷದ ಹೈಕಮಾಂಡ್ ಜತೆ ಚರ್ಚೆ ನಡೆಸಲಿದ್ದಾರೆ. ಬಿಜೆಪಿ ಪಾದಯಾತ್ರೆ ಬಳ್ಳಾರಿ ತಲುಪುವ ಮುನ್ನವೇ ಈ ಕೌಂಟರ್ ಯಾತ್ರೆಯನ್ನು ಕಾರ್ಯರೂಪಕ್ಕೆ ತರಲು ಯೋಜನೆ ರೂಪಿಸಲಾಗಿದೆ. ಯಾತ್ರೆಯ ಆರಂಭಿಕ ಸಿದ್ಧತೆಯಾಗಿ ಮೊದಲ ಹಂತದಲ್ಲಿ ಪಕ್ಷದ ಪ್ರಮುಖ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಲು ನಿರ್ಧರಿಸಲಾಗಿದೆ. ಆ ಬಳಿಕ ಪೂರ್ಣ ಪ್ರಮಾಣದ ಯಾತ್ರೆಯ ದಿನಾಂಕ ಮತ್ತು ರೂಪುರೇಷೆಗಳನ್ನು ಅಂತಿಮಗೊಳಿಸಲಾಗುತ್ತದೆ ಎಂದು ಪಕ್ಷದ ಮೂಲಗಳು ತಿಳಿಸಿವೆ

# ಎಸ್‌ಡಿಎಂಸಿ ಅಧ್ಯಕ್ಷರಾಗಿ ರಮೇಶ್ ಬಾರಿಕೆರ್ ಆಯ್ಕೆ



ಬಳ್ಳಾರಿ (ಕಂಪ್ಲಿ) ಜಿಲ್ಲೆಯ ಕಂಪ್ಲಿ ತಾಲೂಕಿನ ಎಮ್ಮಿಗನೂರು ಗ್ರಾಮದ ಕೆಪಿಎಸ್ ಶಾಲೆಯ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಬಿ,ರಮೇಶ್ ಅವರನ್ನು ನೂತನ ಅಧ್ಯಕ್ಷರಾಗಿ ಮತ್ತು ಮರಿಸ್ವಾಮಿಯನ್ನು ಉಪಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದು ಶಾಲೆಯ ಮುಖ್ಯ ಗುರುಗಳು ತಿಳಿಸಿದ್ದಾರೆ.

ಶಾಸಕ ಜೆ.ಎನ್. ಗಣೇಶ್ ಅವರ ಆದೇಶದ ಮೇರೆಗೆ ಈ ಹಿಂದೆ ನೇಮಕವಾಗಿದ್ದ ಶ್ರೀ ಹೊಸಳ್ಳಿ ಜಡೇಶ ರವರ ಸ್ಥಾನಕ್ಕೆ ಬಿ,ರಮೇಶ್ ಅವರನ್ನು ಹಾಗೂ ಉಪಾಧ್ಯಕ್ಷರಾಗಿ ಮರಿಸ್ವಾಮಿಯನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಬುಧವಾರ ಶಾಲೆ ಸಭಾಂಗಣದಲ್ಲಿ ಹೊಸಳ್ಳಿ ಜಡೆಶರವರಿಗೆ ಬೀಳ್ಕೊಡುಗೆ ಸಮಾರಂಭ ನೆಡೆಯಿತು ನಂತರ ಶಾಲೆಯ ಎಸ್‌ಡಿಎಂಸಿ ಸದಸ್ಯರ ನೇತೃತ್ವದಲ್ಲಿ, ಶಾಲೆಯ ಮುಖ್ಯಗುರುಗಳು ಹಾಗೂ ಗ್ರಾಮದ ಹಿರಿಯರ ಸಮ್ಮುಖದಲ್ಲಿ ರಮೇಶ್ ಬಾರಿಕೆರ್ ಅವರು ಕೆಪಿಎಸ್ ಶಾಲೆಯ ನೂತನ ಅಧ್ಯಕ್ಷರಾಗಿ ಪದಗ್ರಹಣ ಮಾಡಿದರು.ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ಹುಲುಗಪ್ಪ. ಹಾಗೂ ಪ್ರಭಾರಿ ಪ್ರಾಂಶುಪಾಲರಾದ ವೀರೇಶ, ಶಾಲೆಯ ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಹಾಗೂ ಗ್ರಾಮದ ಮುಖಂಡರಾದ ಎಲ್ಲರ್ತಿ ರಾಘವೇಂದ್ರ ರೆಡ್ಡಿ. ಟಿ, ಪಿ ಜಡೇಪ್ಪ, ಶರಣ ಬಸವ ಗೌಡ, ಜಡೇಸಿದ್ದ ಸ್ವಾಮಿ ಸೇರಿದಂತೆ ಗ್ರಾಮದ ಶಿಕ್ಷಣ ಪ್ರೇಮಿಗಳು ನೂತನ ಅಧ್ಯಕ್ಷರಿಗೆ ಶುಭ ಹಾರೈಸಿದರು.

ಶಾಲೆಯ ಶೈಕ್ಷಣಿಕ ಅಭಿವೃದ್ಧಿ, ಮೂಲಸೌಕರ್ಯಗಳ ಸುಧಾರಣೆ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಸಮಿತಿಯೊಂದಿಗೆ ಕೈಜೋಡಿಸಿ ಕಾರ್ಯನಿರ್ವಹಿಸುವುದಾಗಿ ನೂತನ ಅಧ್ಯಕ್ಷರು ತಿಳಿಸಿದರು.

ರಮೇಶ್ ಬಾರಿಕೆರ್ ಅವರ ಆಯ್ಕೆಗೆ ಎಮ್ಮಿಗನೂರು ಗ್ರಾಮದ ಮುಖಂಡರು, ಪೋಷಕರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಅನೈತಿಕ ಸಂಬಂಧದ ಶಂಕೆ; ಮಹಿಳೆಯ ಕುಟುಂಬಸ್ಥರಿಂದ ವ್ಯಕ್ತಿಯ ಭೀಕರ ಕೊಲೆ



ಗದಗ: ಅನೈತಿಕ ಸಂಬಂಧದ ಆರೋಪದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬನನ್ನು ಕಬ್ಬಿಣದ ರಾಡ್‌ನಿಂದ ಹೊಡೆದು ಕೊಲೆ ಮಾಡಿರುವ ಘಟನೆ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಪುಟಗಾಂವ್ ಬಡ್ನಿ ಗ್ರಾಮದಲ್ಲಿ ನಡೆದಿದೆ.

34 ವರ್ಷದ ಈರಣ್ಣ ಅಗಸಿಬಾಗಿಲು ಮೃತ ವ್ಯಕ್ತಿ. ಈರಣ್ಣ ಸ್ಥಳೀಯ ರೇಣುಕಾ ಎಂಬ ಯುವತಿ ಜೊತೆ ಅನೈತಿಕ ಸಂಬಂಧ ಹೊಂದಿದ್ದ ಎನ್ನಲಾಗಿದೆ.

ಈರಣ್ಣ ಹಾಗೂ ರೇಣುಕಾ ಇಬ್ಬರು ಒಟ್ಟಿಗೆ ಇದ್ದ ವೇಳೆ ರೇಣುಕಾಳ ಕುಟುಂಬಸ್ಥರು ರೆಡ್‌ಹ್ಯಾಂಡ್ ಆಗಿ ಹಿಡಿದಿದ್ದಾರೆ. ಈ ವೇಳೆ ನಾಲ್ವರು ಸೇರಿ ಈರಣ್ಣನ ತಲೆಗೆ ಕಬ್ಬಿಣದ ರಾಡ್‌ನಿಂದ ಬಲವಾಗಿ ಹೊಡೆದಿದ್ದು, ಗಂಭೀರವಾಗಿ ಗಾಯಗೊಂಡ ಈರಣ್ಣ ಮೃತಪಟ್ಟಿದ್ದಾನೆ.

ಈ ಪ್ರಕರಣದಲ್ಲಿ ರೇಣುಕಾ ಕಳಸಾಪೂರ (22), ಆಕೆಯ ಪತಿ ಆಂಜನೇಯ ಕಳಸಾಪೂರ (32), ರೇಣುಕಾಳ ತಾಯಿ ಹನುಮವ್ವ ಭೋವಿ (40) ಹಾಗೂ ಸಹೋದರ ಧರ್ಮರಾಜ್ ಭೋವಿ (24) ಆರೋಪಿಗಳು.

ಕೊಲೆ ಬಳಿಕ ಆರೋಪಿಗಳು ಈರಣ್ಣ ವಿರುದ್ಧವೇ ದೂರು ನೀಡಲು ಪೊಲೀಸ್ ಠಾಣೆಗೆ ತೆರಳಿದ್ದರು. ಆದರೆ, ವಿಚಾರಣೆ ವೇಳೆ ಪ್ರಕರಣದ ಸತ್ಯಾಂಶ ಪೊಲೀಸರಿಗೆ ತಿಳಿದುಬಂದಿದ್ದು, ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ.

# ರೇಣುಕಾಸ್ವಾಮಿ ಕೊಲೆ ಕೇಸ್ : ಮಾಫಿ ಸಾಕ್ಷಿ ಪ್ರದೋಷ್ ಹೇಳಿಕೆ ದಾಖಲು

ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಮಾಫಿ ಸಾಕ್ಷಿಯಾಗಿ ಪರಿಗಣಿಸಿರುವ 14ನೇ ಆರೋಪಿ ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು 59ನೇ ಸಿಸಿಹೆಚ್ ಕೋರ್ಟ್ ಮುಂದೂಡಿದೆ. ಹೈಕೋರ್ಟ್‌ನಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆದೇಶ ಇನ್ನೂ ಹೊರಬಾರದ ಹಿನ್ನೆಲೆಯಲ್ಲಿ ವಿಚಾರಣೆಗೆ ಹೆಚ್ಚಿನ ಸಮಯ ನೀಡುವಂತೆ ವಿಶೇಷ ಸರ್ಕಾರಿ ಅಭಿಯೋಜಕ ಪ್ರಸನ್ನಕುಮಾರ್ ನ್ಯಾಯಾಲಯಕ್ಕೆ ಮನವಿ ಮಾಡಿದರು. ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಸೋಮವಾರಕ್ಕೆ ಮುಂದೂಡುವಂತೆ ಎಸ್‌ಪಿಪಿ ಪ್ರಸನ್ನಕುಮಾರ್ ಮನವಿ ಮಾಡಿದರು. ಎಸ್‌ಪಿಪಿ ಮನವಿಯನ್ನು ಪರಿಗಣಿಸಿದ ನ್ಯಾಯಾಲಯ, ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಸೋಮವಾರಕ್ಕೆ ಮುಂದೂಡಿದೆ.

ಇಂದು ಎ14 ಆರೋಪಿ ಪ್ರದೋಷ್‌ನನ್ನು ಜೈಲು ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯಕ್ಕೆ ಆಗಮಿಸಿದ ಪ್ರದೋಷ್, ಅಗತ್ಯ ಪ್ರಕ್ರಿಯೆ ಪೂರ್ಣಗೊಳಿಸಿ ಸಹಿ ಮಾಡಿ ಹೊರಬಂದರು. ವಿಚಾರಣೆ ಮುಂದೂಡಿಕೆಯಾದ ಹಿನ್ನೆಲೆಯಲ್ಲಿ ಪೊಲೀಸರು ಪ್ರದೋಷ್‌ನನ್ನು ಮತ್ತೆ ಜೈಲಿಗೆ ಕಳುಹಿಸಿದ್ದಾರೆ.



# ಎಇಇ ನೇಮಕಾತಿ ಅಕ್ರಮ। ಸರಣಿ ಪ್ರಶ್ನೆ ಕೇಳಿ ಪ್ರಿಯಾಂಕ್ ರಾಜೀನಾಮೆಗೆ ಹೆಚ್‌ಡಿಕೆ ಆಗ್ರಹ



ಬೆಂಗಳೂರು: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ನೇಮಕಾತಿಯಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪುನರುಚ್ಚರಿಸಿದ್ದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಜೆ.ಪಿ. ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ರಮದ ಬಗ್ಗೆ ನನಗೆ ಗೊತ್ತೇ ಇಲ್ಲ ಎಂದಿರುವ ಪ್ರಿಯಾಂಕ್ ಖರ್ಗೆ ನೈತಿಕ ಹೊಣೆ ಹೊತ್ತು ತಕ್ಷಣವೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ನೇಮಕಾತಿಯಲ್ಲಿ ಅಕ್ರಮ ನಡೆದಿರುವುದು ನಿಮ್ಮ ಗಮನಕ್ಕೆ ಬಂದಿಲ್ಲ ಎಂದರೆ ಯಾರ ಕಿವಿಗೆ ಹೂ ಮುಡಿಸುತ್ತಿದ್ದೀರಿ? ಎಂದು ಖಾರವಾಗಿ ಪ್ರಶ್ನಿಸಿದ ಕುಮಾರಸ್ವಾಮಿ ಪ್ರಿಯಾಂಕ್ ಖರ್ಗೆ ನೇರ ಸವಾಲು ಹಾಕಿ ಹಲವು ಪ್ರಶ್ನೆಗಳನ್ನು ಮುಂದಿಟ್ಟು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇ: ಟಿಪ್ಪರ್‌ನಲ್ಲಿ ಆಕಸ್ಮಿಕ ಬೆಂಕಿ



ಕೋಲಾರ: ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇಯಲ್ಲಿ ಚಲಿಸುತ್ತಿದ್ದ ಟಿಪ್ಪರ್‌ನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡ ಪರಿಣಾಮ ಬೆಂಕಿಯ ಕೆನ್ನಾಲಿಗೆಗೆ ಟಿಪ್ಪರ್ ಸುಟ್ಟು ಕರಕಲಾದ ಘಟನೆ ಕೋಲಾರದಲ್ಲಿ ನಡೆದಿದೆ. ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ಡಿ.ಕೆ.ಹಳ್ಳಿ ಪ್ಲಾಂಟೇಶನ್ ಬಳಿ ಈ ಘಟನೆ ನಡೆದಿದ್ದು, ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ಕಾರಿಡಾರ್‌ನಲ್ಲಿ ಬೆಂಗಳೂರಿನಿಂದ ವಿ.ಕೋಟಗೆ ತೆರಳುತ್ತಿದ್ದ ವೇಳೆ ಈ ಘಟನೆ ನಡೆದಿದೆ. ಇನ್ನೂ ಇಂಜಿನ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಆಗಿ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ಚಾಲಕ ಸಂತೋಷ್ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಟಿಪ್ಪರ್ ನಿಲ್ಲಿಸಿ ಪ್ರಾಣಪಯದಿಂದ ಪಾರಾಗಿದ್ದಾನೆ. ಇನ್ನೂ ನಂಗಲಿ ಮೂಲದ ಸುರೇಶ್ ಎಂಬುವವರಿಗೆ ಸೇರಿದ ಟಿಪ್ಪರ್ ಇದಾಗಿದ್ದು, ಬೆಮೆಲ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ

# ಮಗುವನ್ನು ನದಿಗೆಸೆದು ಕೊಂದ ಪಾಪಿ ತಂದೆ

ಕಲಬುರಗಿ: ಹೆಂಡತಿ ಮೇಲಿನ ಸಿಟ್ಟಿಗೆ ವ್ಯಕ್ತಿಯೊಬ್ಬ 4 ವರ್ಷದ ಮಗುವನ್ನು ನದಿಗೆ ಎಸೆದು ಹತ್ಯೆ ಮಾಡಿದ ಘಟನೆ ಚಿಂಚೋಳಿ ತಾಲೂಕಿನ ಹಸರಗುಂಡಗಿ ಗ್ರಾಮದಲ್ಲಿ ನಡೆದಿದೆ. ಸೋಮರಾವ್ ಹೂಗಾರ್ ಮಗುವನ್ನು ಹತ್ಯೆಗೈದ ಆರೋಪಿಯಾಗಿದ್ದಾನೆ. ಈತ ಪತ್ನಿ ಕಲ್ಪನಾ ಜೊತೆ ಗಲಾಟೆ ಮಾಡಿಕೊಂಡಿದ್ದ. ಇದೇ ಸಿಟ್ಟಲ್ಲಿ ಕೆಲಕಾಲ ಮಗು ಗುಂಡೇಶ್‌ನನ್ನು ಎತ್ತಿಕೊಂಡು ಆಟವಾಡಿಸುತ್ತಾ ಕರೆದುಕೊಂಡು ಹೋಗಿ ನಾಗರಾಳ ಜಲಾಶಯಕ್ಕೆ ಎಸೆದಿದ್ದಾನೆ. ಈ ವಿಷಯ ತಿಳಿದ ಬಳಿಕ ಗಂಡನ ವಿರುದ್ಧ ಪತ್ನಿ ಕಲ್ಪನಾ ದೂರು ದಾಖಲಿಸಿದ್ದಾಳೆ. ಬಳಿಕ ಪೊಲೀಸರು ಮಗುವಿನ ಮೃತದೇಹವನ್ನು ಜಲಾಶಯದಿಂದ ಹೊರತೆಗೆದಿದ್ದಾರೆ. ಈ ಕುರಿತು ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಳ್ಳಾರಿ ಜಿಲ್ಲೆಯಾದ್ಯಂತ ಸೆಪ್ಟೆಂಬರ್‌ನಲ್ಲಿ 'ಪ್ರಜಾಸೇವೆ ಆಂದೋಲನ'

## ತಾಲೂಕು-ಹೋಬಳಿ ಮಟ್ಟದಲ್ಲಿ ಕುಂದುಕೊರತೆ ನಿವಾರಣಾ ಶಿಬಿರ



ಬಳ್ಳಾರಿ, ಸೆ.3: ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಿ ಆಡಳಿತವನ್ನು ಜನರ ಮನೆಬಾಗಿಲಿಗೆ ಕೊಂಡೊಯ್ಯುವ ಉದ್ದೇಶದಿಂದ ಜಿಲ್ಲಾಡಳಿತದ ವತಿಯಿಂದ ಸೆಪ್ಟೆಂಬರ್ ತಿಂಗಳಲ್ಲಿ ಜಿಲ್ಲೆಯ ಎಲ್ಲಾ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ 'ಪ್ರಜಾಸೇವೆ ಆಂದೋಲನ' ಹಮ್ಮಿಕೊಳ್ಳಲಾಗಿದೆ.

ಪ್ರತಿ ಶನಿವಾರ ಬೆಳಿಗ್ಗೆ 11ರಿಂದ ಮಧ್ಯಾಹ್ನ 3ರವರೆಗೆ ಆಯಾ ವಿಧಾನಸಭಾ ಕ್ಷೇತ್ರದ ಜನಪ್ರತಿನಿಧಿಗಳ ಉಪಸ್ಥಿತಿಯಲ್ಲಿ ಸಾರ್ವಜನಿಕ ಕುಂದುಕೊರತೆ ನಿವಾರಣಾ ಶಿಬಿರಗಳು ನಡೆಯಲಿವೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ತಿಳಿಸಿದ್ದಾರೆ. ಸೆ.5ರಂದು ಬಳ್ಳಾರಿ ತಾಲೂಕಿನ ಬಳ್ಳಾರಿ ಸರ್ಕಾರಿ ಮುನ್ಸಿಪಾಲ್ ಮೈದಾನ, ಸಿರುಗುಪ್ಪ ತಾಲೂಕಿನ ದೇಶನೂರು, ಸಂಡೂರು ತಾಲೂಕಿನ ವಿಠಲಾಪುರ, ಕಂಪ್ಲಿ ಪಟ್ಟಣದ 20ನೇ ವಾರ್ಡ್ ಮಾರುತಿ ನಗರ ಹಾಗೂ ಕುರುಗೋಡು ತಾಲೂಕಿನ ಕೋಳೂರು ಗ್ರಾಮದಲ್ಲಿ ಶಿಬಿರಗಳು ನಡೆಯಲಿವೆ.

ಸೆ.12ರಂದು ರೂಪನಗುಡಿ, ಹಚ್ಚೊಳ್ಳಿ, ತೋರಣಗಲ್ಲು, ಸುಗ್ಗೇನಹಳ್ಳಿ ಹಾಗೂ ಬಾದನಹಟ್ಟಿ; ಸೆ.19ರಂದು ಬಳ್ಳಾರಿ ನಗರ, ಕರೂರು, ಸಂಡೂರು, ಸಣಾಪುರ ಹಾಗೂ ಯರಂಗಳಿಗಿ; ಸೆ.26ರಂದು ಮೋಕಾ, ತೆಕ್ಕಲಕೋಟೆ, ಬಂಡ್ರಿ, ಹೊಸ ನೆಲ್ಲೂಡಿ ಹಾಗೂ ಏಳುಬೆಂಚಿ ಗ್ರಾಮಗಳಲ್ಲಿ ಶಿಬಿರಗಳು ನಡೆಯಲಿವೆ.

ಆಯಾ ಭಾಗದ ಸಾರ್ವಜನಿಕರು ಶಿಬಿರಗಳಲ್ಲಿ ಭಾಗವಹಿಸಿ ತಮ್ಮ ಅಹವಾಲು ಹಾಗೂ ಕುಂದುಕೊರತೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ಗಮನಕ್ಕೆ ನೇರವಾಗಿ ತಂದು ಪರಿಹಾರ ಪಡೆಯಬಹುದು ಎಂದು ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ 'ಪ್ರಜಾಸೇವಾ ಆಂದೋಲನ' ಸಭೆ

ಬಳ್ಳಾರಿ : ಬಳ್ಳಾರಿ ನಗರ ಮತ್ತು ತಾಲೂಕಿನ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಉದ್ದೇಶದಿಂದ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನ್ಸಿಪಾಲ್ ಕಾಲೇಜು ಮೈದಾನದಲ್ಲಿ ಸೆಪ್ಟೆಂಬರ್ 05 ರಂದು 'ಪ್ರಜಾಸೇವಾ ಆಂದೋಲನ' ಸಭೆಯನ್ನು ಆಯೋಜಿಸಲಾಗಿದೆ.

ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬಿ.ನಾಗೇಂದ್ರ ಮತ್ತು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಇವರುಗಳ ಅಧ್ಯಕ್ಷತೆಯಲ್ಲಿ ಅಂದು ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ಜನರ ಸಮಸ್ಯೆಗಳಿಗೆ ಸಕಾಲದಲ್ಲಿ ಸೂಕ್ತ ಪರಿಹಾರ ನೀಡಲು ಸರ್ಕಾರ ನಿರ್ಧರಿಸಿದ್ದು, ಪ್ರತಿ ತಿಂಗಳ ಶನಿವಾರದಂದು ರಾಜ್ಯಾದ್ಯಂತ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರಜಾಸೇವೆ ಆಂದೋಲನ ಸಭೆಗಳು ನಡೆಯುತ್ತಿವೆ.

ಬಳ್ಳಾರಿ ನಗರ ಮತ್ತು ತಾಲೂಕಿನ ನಾಗರಿಕರು ತಮ್ಮ ಸಮಸ್ಯೆ, ಕುಂದುಕೊರತೆಗಳ ಅಹವಾಲುಗಳೊಂದಿಗೆ ಈ ಸಭೆಯಲ್ಲಿ ಭಾಗವಹಿಸಿ ಪರಿಹಾರ ಕಂಡುಕೊಳ್ಳುವುದರ ಜೊತೆಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಬಳ್ಳಾರಿ ತಾಲೂಕು ತಹಶೀಲ್ದಾರರಾದ ರೇಖಾ.ಟಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಪಿಒಪಿ ಗಣೇಶ ಮೂರ್ತಿ ಬಳಕೆ ನಿಷೇಧ: ಜಿಲ್ಲಾಧಿಕಾರಿ

ಬಳ್ಳಾರಿ : ಜಿಲ್ಲೆಯ ನದಿ, ಕೆರೆ, ಬಾವಿ ಸೇರಿದಂತೆ ನೈಸರ್ಗಿಕ ಜಲಮೂಲಗಳು ಕಲುಷಿತಗೊಳ್ಳುವುದನ್ನು ತಡೆಯುವ ಉದ್ದೇಶದಿಂದ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಹಾಗೂ ರಾಸಾಯನಿಕ ಯುಕ್ತ ಬಣ್ಣಗಳನ್ನು ಬಳಸಿ ತಯಾರಿಸಿದ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯನ್ನು ಬಳ್ಳಾರಿ ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರದ ಆದೇಶ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನಗಳ ಅನ್ವಯ ಈ ಕ್ರಮ ಕೈಗೊಳ್ಳಲಾಗಿದ್ದು, ಪರಿಸರ ಸಂರಕ್ಷಣೆಗಾಗಿ ಕೇವಲ 'ಹಸಿರು ಪಟಾಕಿ'ಗಳನ್ನು ಮಾತ್ರ ಮಾರಾಟ ಮಾಡಲು ಮತ್ತು ಬಳಸಲು ಅನುಮತಿಸಲಾಗಿದೆ.

ವಿಶೇಷ ಸ್ಕ್ವಾಡ್‌ಗಳ ರಚನೆ ಗಣೇಶ ಹಬ್ಬದ ಅವಧಿಯಲ್ಲಿ ನಿಯಮ ಉಲ್ಲಂಘನೆಯಾಗದಂತೆ ಕಣ್ಗಾವಲಿಡಲು ನಗರ, ಪಟ್ಟಣ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿಶೇಷ ಜಾಗೃತ ದಳ ತಂಡಗಳನ್ನು ರಚಿಸಲಾಗಿದೆ.

ತಂಡದ ಮುಖ್ಯಸ್ಥರು: ಮಹಾನಗರ ಪಾಲಿಕೆ ಆಯುಕ್ತರು, ಪೌರಾಯುಕ್ತರು, ತಹಶೀಲ್ದಾರರು, ಪುರಸಭೆ ಹಾಗೂ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳು, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.

ತಂಡದ ಸದಸ್ಯರು: ಸಂಬಂಧಿಸಿದ ವ್ಯಾಪ್ತಿಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸಿಬ್ಬಂದಿ, ಸಾರಿಗೆ ಇಲಾಖೆಯ ಹಿರಿಯ/ಕಿರಿಯ ಮೋಟಾರ್ ವಾಹನ ನಿರೀಕ್ಷಕರು. ಸದಸ್ಯ ಸಂಚಾಲಕರು: ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ. ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಯಾವುದೇ ಪಿ.ಒ.ಪಿ ಗಣೇಶ ಮೂರ್ತಿಗಳು ಹಾಗೂ ಹಾನಿಕಾರಕ ರಾಸಾಯನಿಕ ಬಣ್ಣ ಲೇಪಿತ ವಿಗ್ರಹಗಳ ತಯಾರಿಕೆ, ಸಾಗಾಣಿಕೆ ಮತ್ತು ಮಾರಾಟ ನಡೆಯದಂತೆ ಕಟ್ಟುನಿಟ್ಟಾಗಿ ನಿಗಾವಹಿಸುವುದು. ಪಟಾಕಿ ವ್ಯಾಪಾರಿಗಳಲ್ಲಿ ಹಸಿರು ಪಟಾಕಿ ಮಾರುವವರಿಗೆ ಮಾತ್ರ ಪರವಾನಗಿ ನೀಡುವುದು. ನಿಷೇಧಿತ ಪಟಾಕಿ ಮಾರಾಟ ಕಂಡುಬಂದರೆ ಮುಟ್ಟುಗೋಲು ಹಾಕಿಕೊಂಡು ಕಠಿಣ ಕಾನೂನು ಕ್ರಮ ಕೈಗೊಳ್ಳುವುದು.

ಎಲ್ಲಾದರೂ ಅಕ್ರಮ ಪಿ.ಒ.ಪಿ ವಿಗ್ರಹಗಳು ಕಂಡುಬಂದಲ್ಲಿ, ಅವುಗಳನ್ನು ತಕ್ಷಣವೇ ಜಪ್ತಿ ಮಾಡಿ ಧಾರ್ಮಿಕತೆಗೆ ಧಕ್ಕೆ ಬಾರದಂತೆ ವೈಜ್ಞಾನಿಕವಾಗಿ ವಿಲೇವಾರಿ ಮಾಡುವುದು. ಸಾರ್ವಜನಿಕರಲ್ಲಿ ಮಣ್ಣಿನ ಪರಿಸರ ಸ್ನೇಹಿ ಗಣಪತಿ ಮೂರ್ತಿಗಳ ಬಳಕೆಯ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸುವುದು.

ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಲಾಗಿದ್ದು, ಕರ್ತವ್ಯದಲ್ಲಿ ಯಾವುದೇ ಲೋಪ ಅಥವಾ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

# ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಬಳ್ಳಾರಿ : ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2026–27ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಾಲ ಹಾಗೂ ಸಹಾಯಧನ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 27 ಕೊನೆಯ ದಿನವಾಗಿದ್ದು, 'ಅರಿವು' ಶೈಕ್ಷಣಿಕ ಸಾಲ ಯೋಜನೆಗೆ ಯಾವುದೇ ಕೊನೆಯ ದಿನಾಂಕ ಇರುವುದಿಲ್ಲ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ. ಹೊನ್ನೂರಪ್ಪ ಅವರು ತಿಳಿಸಿದ್ದಾರೆ. ಅರ್ಜಿದಾರರು ಮಡಿವಾಳ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರ ಕಡ್ಡಾಯ. ಸಾಮಾನ್ಯ ವಯೋಮಿತಿ 18 ರಿಂದ 55 ವರ್ಷಗಳ ಒಳಗಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ಗರಿಷ್ಠ ರೂ. 98,000 ಹಾಗೂ ನಗರ ಪ್ರದೇಶದವರಿಗೆ ರೂ. 1,20,000 ಮಿತಿಯೊಳಗಿರಬೇಕು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಕಲ್ಪಿಸಲಾಗುವುದು. ಈ ಹಿಂದೆ ನಿಗಮ ಅಥವಾ ಸರ್ಕಾರದ ಯಾವುದೇ ಯೋಜನೆಯಡಿ ಸೌಲಭ್ಯ ಪಡೆದಿರಬಾರದು. ರ್ಜಿದಾರರ ಮೊಬೈಲ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆಯು ಕಡ್ಡಾಯವಾಗಿ ಆಧಾರ್ ಸಂಖ್ಯೆಗೆ ಜೋಡಣೆಯಾಗಿರಬೇಕು. ಅಲ್ಲದೆ, ಆಧಾರ್ ಕಾರ್ಡ್‌ನಲ್ಲಿರುವ ಹೆಸರು ಮತ್ತು ವಿಳಾಸವು ಜಾತಿ/ಆದಾಯ ಪ್ರಮಾಣಪತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್‌ಗೆ ತಾಳೆಯಾಗಬೇಕು. ಆಯ್ಕೆಯಲ್ಲಿ ಮಹಿಳೆಯರಿಗೆ ಶೇ. 33, ವಿಕಲಚೇತನರಿಗೆ ಶೇ. 5 ಹಾಗೂ ತೃತೀಯ ಲಿಂಗಿಗಳಿಗೆ ಶೇ. 1 ರಷ್ಟು ಮೀಸಲಾತಿ ನಿಗದಿಪಡಿಸಲಾಗಿದೆ.

ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ ಮತ್ತು ನವೀಕರಣ): ವಯೋಮಿತಿ 18 ರಿಂದ 30 ವರ್ಷ, ವಾರ್ಷಿಕ ವರಮಾನ ಮಿತಿ ರೂ. 3.50 ಲಕ್ಷ. ಸ್ವಾವಲಂಬಿ ಸಾರಥಿ ಯೋಜನೆ: ವಯೋಮಿತಿ 21 ರಿಂದ 45 ವರ್ಷಗಳು. ವಿದೇಶಿ ವ್ಯಾಸಂಗ ಸಾಲ ಯೋಜನೆ: ವಾರ್ಷಿಕ ವರಮಾನ ಮಿತಿ ರೂ. 15 ಲಕ್ಷ. ವಯೋಮಿತಿ ಸ್ನಾತಕೋತ್ತರ ಪದವೀಧರರಿಗೆ 25 ವರ್ಷ ಹಾಗೂ ಪಿಎಚ್.ಡಿ ಅಭ್ಯರ್ಥಿಗಳಿಗೆ 27 ವರ್ಷ. ಗಂಗಾ ಕಲ್ಯಾಣ ಯೋಜನೆ: ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಹಾಗೂ ಇತರೆ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಜಮೀನು ಹೊಂದಿರಬೇಕು.

ಆಧುನಿಕ ಲ್ಯಾಂಡ್ರಿ ಯೋಜನೆ (ಹೊಸ ಯೋಜನೆ): ಬೆಂಗಳೂರು ಮತ್ತು ಮೈಸೂರು ನಗರದ ಧೋಬಿ ಘಾಟ್‌ಗಳಲ್ಲಿ ತಲಾ ರೂ. 75 ಲಕ್ಷ ವೆಚ್ಚದಲ್ಲಿ ಆಧುನಿಕ ಯಂತ್ರೋಪಕರಣಗಳೊಂದಿಗೆ (ವಾಷಿಂಗ್ ಮೆಷಿನ್, ಡ್ರೈಯರ್, ಐರನಿಂಗ್ ಮೆಷಿನ್) ಆಧುನಿಕ ಲ್ಯಾಂಡ್ರಿ ಸ್ಥಾಪನೆ. 2024–25 ಮತ್ತು 2025–26ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಈವರೆಗೆ ಸೌಲಭ್ಯ ಪಡೆಯದೇ ಇರುವವರು ಅದೇ ಯೋಜನೆಗೆ ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ; ಅವರನ್ನು ಪ್ರಸ್ತುತ ಸಾಲಿಗೂ ಪರಿಗಣಿಸಲಾಗುವುದು. ಆದರೆ, ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಬಯಸಿದರೆ ಹೊಸದಾಗಿ ಅರ್ಜಿ ಹಾಕಬಹುದು. ಅರ್ಹರು ಬೆಂಗಳೂರು–ಒನ್, ಕರ್ನಾಟಕ–ಒನ್, ಅಟಲ್–ಜೀ ಜನಸ್ನೇಹಿ ಕೇಂದ್ರ ಅಥವಾ ನಾಗರಿಕ ಸೇವಾ ಕೇಂದ್ರಗಳ ಮೂಲಕ 'ಸೇವಾ ಸಿಂಧು' ಪೋರ್ಟಲ್‌ನಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗಾಗಿ ನಿಗಮದ ಜಾಲತಾಣ https://kmmd.karnataka.gov.in/en ಗೆ ಭೇಟಿ ನೀಡಬಹುದು ಅಥವಾ ಕೇಂದ್ರ ಕಚೇರಿ (080–22374832/833) ಹಾಗೂ ಜಿಲ್ಲಾ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು

# ಗ್ಯಾರಂಟಿ ಸಮಿತಿಗಳ ರಚನೆಗೆ 15 ದಿನಗಳ ಗಡುವು: ಪಿ.ಟಿ. ಪರಮೇಶ್ವರ ನಾಯ್ಕ ಸೂಚನೆ



ಬಳ್ಳಾರಿ : ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಮೇಲ್ವಿಚಾರಣಾ ಸಮಿತಿಗಳ ರಚನೆ ಪ್ರಕ್ರಿಯೆಯನ್ನು ಚುರುಕುಗೊಳಿಸಲು 15 ದಿನಗಳ ಕಾಲಾವಕಾಶ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯ್ಕ ಅವರು ಹೇಳಿದರು.ನಗರದ ಲೋಕೋಪಯೋಗಿ ಇಲಾಖೆಯ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರು ಹಾಗೂ ಅನುಷ್ಠಾನ ಅಧಿಕಾರಿಗಳೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ರಚನೆ ಕುರಿತು ಬುಧವಾರ ಸಭೆ ನಡೆಸಿ ಅವರು ಮಾತನಾಡಿದರು.ಪಂಚಾಯಿತಿ ಮಟ್ಟ ಹಾಗೂ ನಗರ ಪ್ರದೇಶಗಳಲ್ಲಿ ಗ್ಯಾರಂಟಿ ಸಮಿತಿಗಳನ್ನು ತುರ್ತಾಗಿ ರಚಿಸಲು ಶಾಸಕರಿಗೆ 15 ದಿನಗಳ ಕಾಲಾವಕಾಶ ನೀಡಲಾಗಿದೆ. ಶಾಸಕರ ನೇತೃತ್ವದಲ್ಲೇ ಈ ಸಮಿತಿಗಳ ಪಟ್ಟಿ ಅಂತಿಮಗೊಳ್ಳಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಯಾವುದೇ ಗೊಂದಲಗಳಿಲ್ಲದಿದ್ದರೂ, ಪಟ್ಟಣ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ಸಮಿತಿಗಳ ರಚನೆಯಲ್ಲಿ ಎದುರಾಗಿರುವ ತೊಡಕುಗಳನ್ನು ಶೀಘ್ರವಾಗಿ ಬಗೆಹರಿಸಲು ಮಾರ್ಗಸೂಚಿಗಳನ್ನು ನೀಡಲಾಗಿದೆ ಎಂದು ತಿಳಿಸಿದರು.ಸರ್ಕಾರದ ಗ್ಯಾರಂಟಿ ಯೋಜನೆಗಳು, ಇವು ಕೇವಲ ಯೋಜನೆಗಳಲ್ಲ, ಇತಿಹಾಸ ಸೃಷ್ಟಿಸಿರುವ ಸಾಮಾಜಿಕ ಭದ್ರತೆಯ ಕಾರ್ಯಕ್ರಮಗಳಾಗಿವೆ. ಹಿಂದೆ ನೀಡಲಾಗುತ್ತಿದ್ದ ವೃದ್ಧಾಪ್ಯ, ವಿಧವಾ ವೇತನ ಹಾಗೂ ವಿಕಲಚೇತನರ ಪಿಂಚಣಿಗಳು ನಿರ್ದಿಷ್ಟ ವರ್ಗದ ಸಂಕಷ್ಟಗಳಿಗೆ ಆಸರೆಯಾಗಿದ್ದವು. ಆದರೆ, ಪ್ರಸ್ತುತ ಜಾರಿಯಲ್ಲಿರುವ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಹಾಗೂ ಯುವನಿಧಿಯಂತಹ ಯೋಜನೆಗಳು ಪ್ರತಿಯೊಂದು ಬಡ ಕುಟುಂಬಕ್ಕೂ ಆರ್ಥಿಕ ಸ್ವಾವಲಂಬನೆ ತಂದುಕೊಟ್ಟಿವೆ ಎಂದು ಅಭಿಮತ ವ್ಯಕ್ತಪಡಿಸಿದರು. ಎಲ್ಲಾ ಜಾತಿ, ಧರ್ಮಗಳ ಬಡ ಜನರು ಸಮಾಜದಲ್ಲಿ ನೆಮ್ಮದಿಯ ಜೀವನ ರೂಪಿಸಿಕೊಳ್ಳಲು ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಬದ್ಧತೆಯಿಂದ ಜಾರಿಗೊಳಿಸುತ್ತಿದೆ ಎಂದು ತಿಳಿಸಿದರು.

**ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಒಟ್ಟು 168 ಸಮಿತಿಗಳ ಸ್ಥಾಪನೆ:**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ ಬಳ್ಳಾರಿ ಜಿಲ್ಲೆಯಾದ್ಯಂತ ಗ್ಯಾರಂಟಿ ಸಮಿತಿಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗಿದ್ದು, ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 168 ಸಮಿತಿಗಳನ್ನು ರಚಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.ಸರ್ಕಾರದ ಆದೇಶದಂತೆ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಮಿತಿಗಳ ರಚನೆಗೆ ಅಗತ್ಯ ಮಾನದಂಡಗಳನ್ನು ನಿಗದಿಪಡಿಸಲಾಗಿದೆ. ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಟ್ಟು 68 ಗ್ಯಾರಂಟಿ ಸಮಿತಿಗಳು ಅಸ್ತಿತ್ವಕ್ಕೆ ಬರಲಿವೆ. ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ವಾರ್ಡ್‌ಗಳ ಆಧಾರದ ಮೇಲೆ ಸಮಿತಿಗಳನ್ನು ಹಂಚಿಕೆ ಮಾಡಲಾಗಿದೆ ಎಂದರು.

**ಗ್ರಾಮ ಪಂಚಾಯಿತಿ ಮಟ್ಟದಲ್ಲಿ 100 ಸಮಿತಿಗಳು:**

ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಪಾರದರ್ಶಕ ಆಡಳಿತ ಮತ್ತು ಯೋಜನೆಗಳ ತ್ವರಿತ ತಲುಪುವಿಕೆಗೆ ಪೂರಕವಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಸಮಿತಿ ರಚಿಸಲಾಗುತ್ತಿದೆ. ಜಿಲ್ಲೆಯ 5 ತಾಲ್ಲೂಕುಗಳ ಒಟ್ಟು 100 ಗ್ರಾಮ ಪಂಚಾಯಿತಿಗಳಲ್ಲಿ ತಲಾ ಒಂದೊಂದು ಸಮಿತಿಯಂತೆ 100 ಗ್ಯಾರಂಟಿ ಸಮಿತಿಗಳು ಕಾರ್ಯನಿರ್ವಹಿಸಲಿವೆ ಎಂದರು.ಈ ಸಮಿತಿಗಳು ಸ್ಥಳೀಯ ಮಟ್ಟದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿವೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಕಾರ್ಯನಿರ್ವಹಿಸಲಿವೆ ಎಂದು ವಿವರಿಸಿದರು.ಸರ್ಕಾರದ ಜನಪರ ಯೋಜನೆಗಳು ಹಾಗೂ ಅವುಗಳಿಗಾಗಿ ವೆಚ್ಚ ಮಾಡುತ್ತಿರುವ ಸಾವಿರಾರು ಕೋಟಿ ರೂಪಾಯಿಗಳ ಅನುದಾನದ ಬಗ್ಗೆ ಸಾರ್ವಜನಿಕರಿಗೆ ಸಮರ್ಪಕವಾಗಿ ಮಾಹಿತಿ ತಲುಪಿಸಬೇಕು. ಗ್ಯಾರಂಟಿ ಯೋಜನೆಗಳ ಯಶಸ್ಸು ಮತ್ತು ಅವುಗಳ ಉಳಿವಿಗೆ ಸಮಿತಿ ಸದಸ್ಯರು ಗ್ರಾಮೀಣ ಹಾಗೂ ತಾಲೂಕು ಮಟ್ಟದಲ್ಲಿ ತಳಮಟ್ಟದಿಂದ ಪ್ರಚಾರ ನಡೆಸಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ, ಬಳ್ಳಾರಿ ತಾಲೂಕು ಅಧ್ಯಕ್ಷ ಗೋನಾಳ್ ನಾಗಭೂಷಣಗೌಡ, ಕುರುಗೋಡು ತಾಲೂಕು ಅಧ್ಯಕ್ಷ ಬಸವನಗೌಡ ಸೇರಿದಂತೆ ಸಮಿತಿಯ ಸದಸ್ಯರು, ಮುಖಂಡರು ಉಪಸ್ಥಿತರಿದ್ದರು.

# ಜನಮನಸೂರೆಗೊಂಡ ಪ್ರಮೀಳಾ ದರ್ಬಾರ್ ಅರ್ಥಾತ್ ಅರ್ಜುನನ ಗರ್ವಭಂಗ ಪೌರಾಣಿಕ ನಾಟಕ



ಬಳ್ಳಾರಿ : ತಾಲೂಕಿನ ಬೆಳಗಲ್ಲು ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ಜಾತ್ರೆಯ ಪ್ರಯುಕ್ತ ಡಾ. ಬಿಆರ್ ಅಂಬೇಡ್ಕರ್ ಕೃಪಾಪೋಷಿತ ಕರ್ನಾಟಕ ನಾಟಕ ಮಂಡಳಿ ಬೆಳಗಲ್ಲು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಳ್ಳಾರಿ ಇವರ ಸಹಯೋಗದಲ್ಲಿ ಆಗಸ್ಟ್ 29ರ ಶನಿವಾರದಂದು ರಾತ್ರಿ 8:30ಕ್ಕೆ ಪ್ರಮೀಳಾ ದರ್ಬಾರ್ ಅರ್ಥತ್ ಅರ್ಜುನನ ಗರ್ವಭಂಗ ಎಂಬ ಸುಂದರ ಪೌರಾಣಿಕ ನಾಟಕವನ್ನು ಪ್ರಸ್ತುತಪಡಿಸಲಾಯಿತು ಎಂದು ನಾಟಕದ ವ್ಯವಸ್ಥಾಪಕ ಆಯೋಜಕರಾದ ಏಕೆ ಯನ್ನಪ್ಪ ಮತ್ತು ಏಕೆ ಸಿದ್ದಪ್ಪ ತಿಳಿಸಿದರು.

ಈ ನಾಟಕದಲ್ಲಿ ಬಾಲಕೃಷ್ಣನಾಗಿ ಏರಿಸ್ವಾಮಿ, ಧರ್ಮರಾಯನಾಗಿ ಪೋತಪ್ಪ, ಅರ್ಜುನನಾಗಿ ಎರಿ ಸ್ವಾಮಿ, ಮಯೂರ ಧ್ವಜನಾಗಿ ಏಕೆ ರಾಜ , ಕೃಷ್ಣನಾಗಿ ಲೋಕಪ್ಪ ಸುಗ್ಗನಹಳ್ಳಿ, ನಕುಲ ಧ್ವಜನಾಗಿ ಪವನ್ ವೃಶ್ಚಿಕೇತು ಆಗಿ ಕೊಟ್ರೇಶ್ ಪ್ರದ್ಯುನ್ನನಾಗಿ ಏ.ಕೆ ಇರಿ ಸ್ವಾಮಿ ತಾಮ್ರಧ್ವಜನಾಗಿ ಕಂಪ್ಲಿ ಹಿರಿ ಸ್ವಾಮಿ ಬಬ್ರುವಾಹನನಾಗಿ ಗಿರಿ ಸ್ವಾಮಿ ಸೇರಿದಂತೆ ಮತ್ತು ಮಹಿಳಾ ಪಾತ್ರದಲ್ಲಿ ಪ್ರಮೀಳಾ ಮತ್ತು ಕುಮದ್ವತಿ ಪಾತ್ರಧಾರಿಯಾಗಿ ಚೌಡಾಪುರ ಮೀನಾಕ್ಷಿ ರುಕ್ಮಿಣಿಯಾಗಿ ತುಮಕೂಡ್ಲಿಗಿ ವಿಚಿತ್ರ ರೇಖೆ ಮತ್ತು ಚಿತ್ರಾಂಗ ಪಾತ್ರಧಾರಿಯಾಗಿ ಮಂಜುಳಾ ದಾವಣಗೆರೆ ಇವರು ಅಭಿನಯಿಸಿದರು.

ಈ ನಾಟಕದ ಹಿನ್ನೆಲೆ ಸಂಗೀತದಲ್ಲಿ ಹಾರ್ಮೋನಿಯಂ ಜಾನೆ ಕುಂಟೆ ಬರಮಪ್ಪ, ತಬಲ ಉತ್ತನೂರು ರಂಗಪ್ಪ ಪ್ಯಾಡ್ ದಾವಣಗೆರೆ ವೆಂಕಟೇಶ್ ಮತ್ತು ಹಿನ್ನೆಲೆ ಗಾಯಕ ರಾಗಿ ನಿಂಬಗಲ್ ವಿರೇಶ ಸ್ವಾಮಿ, ಹಾವಿನ ಹಾಳ್ ಮಾರೆಪ್ಪ ಮೆಟ್ರಿ ದೊಡ್ಡಬಸಪ್ಪ ಬೆಳಗಲ್ ರುದ್ರಪ್ಪ ನಡೆಸಿಕೊಟ್ಟರು. ಮತ್ತು ಸಾರಥಿಯಾಗಿ ಗುಡ್ಡೂರು ಪಾಂಡು ಕಥಾನಾಯಕರಾಗಿ ಹಾಗಲೂರು ಪರಶುರಾಮ ಕಾರ್ಯ ನಿರ್ವಹಿಸಿದರು. ರಂಗಸಜ್ಜಿ ಕೆ ಮತ್ತು ವಸ್ತ್ರ ಅಲಂಕಾರವನ್ನು ಎಮ್ಮಿಗನೂರು ಬಸಪ್ಪ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಏಕೆ ಹುಲುಗಪ್ಪ ಹೆಚ್ಚು ಹುಲಿಗಪ್ಪ ಏಕೆ ಮಹಾಲಿಂಗಯ್ಯ ಮತ್ತು ಗ್ರಾಮದ ಮುಖಂಡರಾದ ಎಚ್ ಪಂಪನಗೌಡ ಪಾಲಾಕ್ಷಿ ಗೌಡ ನಾಗಪ್ಪ ಗೌಡ ನಾಗಭೂಷಣ ಸ್ವಾಮಿ ಮಂಜುನಾಥ ಸ್ವಾಮಿ ಉಪ್ಪಾರ್ ಬಸಪ್ಪ ಬಿ ಎಲ್ಲಪ್ಪ ಸೇರಿದಂತೆ ಹಲವಾರು ಜನ ಇದ್ದರು.

ಈ ನಾಟಕವನ್ನು ಬೆಳಗಲ್ಲು ಗ್ರಾಮದ ಸಾರ್ವಜನಿಕರು ಹಾಗೂ ಸುತ್ತಮುತ್ತಲ ಗ್ರಾಮಗಳ ಕಲಾಭಿಮಾನಿಗಳು ಮತ್ತು ಕಲಾ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಾಟಕವನ್ನು ವೀಕ್ಷಿಸಿ ಆನಂದಿಸಿದರು.

# ಯುವಜನರಲ್ಲಿ ಜಾನಪದ ಕಲೆಗಳ ಆಸಕ್ತಿ ಹೆಚ್ಚುತ್ತಿದೆ: ಡಾ. ಸತೀಶ್ ಹಿರೇಮಠ



ಬಳ್ಳಾರಿ, ಸೆ.3: ವಿದ್ಯಾರ್ಥಿ ಹಾಗೂ ಯುವಜನರಲ್ಲಿ ನಾಡಿನ ಜಾನಪದ ಕಲೆಗಳ ಬಗ್ಗೆ ಆಸಕ್ತಿ ಹೆಚ್ಚುತ್ತಿರುವುದು ಆಶಾದಾಯಕ ಬೆಳವಣಿಗೆ ಎಂದು ಶ್ರೀ ಕೊಟ್ಟೂರುಸ್ವಾಮಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಸತೀಶ್ ಎ. ಹಿರೇಮಠ ಹೇಳಿದರು. ಕರ್ನಾಟಕ ಜಾನಪದ ಪರಿಷತ್ತು ಜಿಲ್ಲಾ ಘಟಕ ಹಾಗೂ ಹಳೇ ದರೋಜಿ ನಾಡೋಜ ಬುರ್ರಕಥಾ ಈರಮ್ಮ ಫೌಂಡೇಶನ್ ಸಹಯೋಗದಲ್ಲಿ ನಗರದ ಸೋನಿಯಾ ಗಾಂಧಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ವಿಶ್ವ ಜಾನಪದ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು. ಆಧುನಿಕತೆ ಹಾಗೂ ಮೊಬೈಲ್ ಹಾವಳಿಯ ನಡುವೆಯೂ ಯುವ ಪೀಳಿಗೆ ನಮ್ಮ ಮಣ್ಣಿನ ಸಂಸ್ಕೃತಿ ಉಳಿಸಿ ಬೆಳೆಸಲು ಆಸಕ್ತಿ ತೋರುತ್ತಿರುವುದು ಸಂತಸದ ಸಂಗತಿ ಎಂದರು.

ಮುಖ್ಯ ಅತಿಥಿ, ನಿವೃತ್ತ ಡಿಡಿಪಿಐ ಹಾಗೂ ಸಾಹಿತಿ ಮಲ್ಲಿಕಾರ್ಜುನಸ್ವಾಮಿ ಹಿರೇಮಠ ಮಾತನಾಡಿ, ನಾಡೋಜ ಬುರ್ರಕಥಾ ಈರಮ್ಮ ಅವರು ಜ್ಞಾನದ ಗಣಿಯಾಗಿದ್ದು, ಕನ್ನಡ ನಾಡಿನ ಹೆಮ್ಮೆ ಎಂದರು. ತಹಶೀಲ್ದಾರ್ ವಿನಾಯಕ ಗೋಡಬೋಲೆ ಮಾತನಾಡಿ, ಜಾನಪದವು ತಲೆತಲಾಂತರದಿಂದ ಬಾಯಿಂದ ಬಾಯಿಗೆ ಹರಿದು ಬಂದ ಕಲೆ, ಸಂಪ್ರದಾಯ ಹಾಗೂ ಜ್ಞಾನದ ರೂಪವಾಗಿದ್ದು, ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

'ಬಳ್ಳಾರಿ ಜಿಲ್ಲೆಯ ಜಾನಪದ ಪರಂಪರೆ' ಕುರಿತು ವಿಶೇಷ ಉಪನ್ಯಾಸ ನೀಡಿದ ಜಾನಪದ ಗಾಯಕ ಎಸ್.ಎಂ. ಹುಲುಗಪ್ಪ, ಬಳ್ಳಾರಿ ಜಿಲ್ಲೆ ಶ್ರೀಮಂತ ಜಾನಪದ ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಹೊಂದಿದೆ ಎಂದರು. ನಾಡೋಜ ಮುದೇನೂರು ಸಂಗಣ್ಣ, ಡಾ. ಮಲಶೆಟ್ಟಿ, ನಾಡೋಜ ಬೆಳಗಲ್ಲು ವೀರಣ್ಣ, ನಾಡೋಜ ಬುರ್ರಕಥಾ ಈರಮ್ಮ, ನಾಡೋಜ ಕಪ್ಪಗಲ್ಲು ಪದ್ಮಮ್ಮ ಸೇರಿದಂತೆ ಹಲವು ಕಲಾವಿದರು ಜಿಲ್ಲೆಯ ಜಾನಪದ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಎಲ್ಲ ಸಾಹಿತ್ಯ ಪ್ರಕಾರಗಳಿಗೂ ಜಾನಪದವೇ ತಾಯಿಬೇರು ಎಂದು ತಿಳಿಸಿದರು.

ಕರ್ನಾಟಕ ಜಾನಪದ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ಹಾಗೂ ಹಿರಿಯ ಪತ್ರಕರ್ತ ಸಿ. ಮಂಜುನಾಥ ಮಾತನಾಡಿ, ಪ್ರಶಿಕ್ಷಣಾರ್ಥಿಗಳು ತರಗತಿಯಲ್ಲಿ ಉತ್ತಮವಾಗಿ ಕಲಿತರೆ ಭವಿಷ್ಯದಲ್ಲಿ ಮಕ್ಕಳಿಗೆ ಪರಿಣಾಮಕಾರಿಯಾಗಿ ಬೋಧಿಸಲು ಸಾಧ್ಯವಾಗುತ್ತದೆ ಎಂದರು. ಪರಿಷತ್ತಿನಿಂದ ಪ್ರಶಿಕ್ಷಣಾರ್ಥಿಗಳ ಮನೋವಿಕಾಸಕ್ಕಾಗಿ ತಜ್ಞರಿಂದ ಉಪನ್ಯಾಸ ಹಾಗೂ ಕಾರ್ಯಾಗಾರಗಳನ್ನು ಆಯೋಜಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ತಾಜುದ್ದೀನ್ ಪಿ., ಆಲ್ಮಸ್ ತಬಸಮ್, ಹಫೀಜಾ ಬೇಗಂ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಎಸ್.ಎಂ. ಹುಲುಗಪ್ಪ ಹಾಗೂ ತಂಡ ಮತ್ತು ಪ್ರಶಿಕ್ಷಣಾರ್ಥಿಗಳ ಜಾನಪದ ಗಾಯನ, ನೃತ್ಯ ಹಾಗೂ ಸಮೂಹ ಗಾಯನ ಗಮನ ಸೆಳೆಯಿತು.

ದಿನಾಂಕ : 04-09-2026

# ಸಿನಿ ಕಹಾನಿ

## ಲೈಟ್ಸ್.. ಕ್ಯಾಮೆರಾ.. ಆಕ್ಷನ್..

## 'ಅನಿರೀಕ್ಷಿತ ಅತಿಥಿಗಳು'

### ಟ್ರೇಲರ್ ನಟ ಪ್ರಮೋದ್ ಶೆಟ್ಟಿ ಬಿಡುಗಡೆ

ಮನೋಜ್ ಅಣ್ಣಯ್ಯ ಅವರ ನಿರ್ದೇಶನದಲ್ಲಿ ಮೂಡಿಬಂದಿರುವ ಚಿತ್ರ 'ಅನಿರೀಕ್ಷಿತ ಅತಿಥಿಗಳು' ಇದೇ ತಿಂಗಳ 18ರಂದು ತೆರೆ ಕಾಣಲಿದೆ. ಇತ್ತೀಚೆಗೆ ಈ ಚಿತ್ರದ ಟ್ರೇಲರನ್ನು ನಟ ಪ್ರಮೋದ್ ಶೆಟ್ಟಿ ಅವರು ಬಿಡುಗ-'ಡೆ ಮಾಡಿದರು. ಈ ಟೀಮ್ ನನಗೆ ರಂಗಭೂಮಿ ದಿನಗಳಿಂದಲೇ ಪರಿಚಯ. ಅದರಲ್ಲೂ ಅನಿರೀಕ್ಷಿತ ಅತಿಥಿಗಳು ಚಿತ್ರದ ಬಗ್ಗೆ ಬೇರೆ ಬೇರೆ ಸಿನಿಮಾ ತಂತ್ರಜ್ಞರು ಹೊಗಳಿ ಮಾತನಾಡುತ್ತಿರುವುದು ನಿಜಕ್ಕೂ ಉತ್ತಮ ಬೆಳವಣಿಗೆಯಾಗಿದೆ ಎಂದರು. ಟ್ರೇಲರ್ ನಲ್ಲಿ ಕಾಡಿನ ಮಧ್ಯೆ ಇರುವ ಒಂಟಿ ಮನೆಯೊಂದನ್ನು ಕಂಡ ಪ್ರಮೋದ್ ಶೆಟ್ಟಿ "ಇದೇ ಮನೆಯಲ್ಲಿ ರಿಷಬ್ ನಟನೆಯ 'ಹೀರೋ' ಸಿನಿಮಾದ ಚಿತ್ರೀಕರಣ ನಡೆದಿತ್ತು. ಅದು ನಮಗೆ ಗೆಲುವು ತಂದುಕೊಟ್ಟಿತ್ತು. ಆ ಮನೆಯಲ್ಲಿ ಅಂಥ ಪಾಸಿಟಿವ್ ಎನರ್ಜಿ ಇದೆ. ನಿಮಗೂ ಅದರ ಗೆಲುವು ಸಿಗಲಿ" ಎಂದು ಶುಭ ಹಾರೈಸಿದರು.
ಅನಿರೀಕ್ಷಿತ ಅತಿಥಿಗಳು ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಮನೋಜ್ ಅಣ್ಣಯ್ಯ ಮಾತನಾಡಿ ನಮ್ಮ ಚಿತ್ರವನ್ನು ನೋಡುತ್ತಿರುವ ಪ್ರೇಕ್ಷಕರು ತಮ್ಮ ಬದುಕಿನಲ್ಲಿ ನಡೆದ ಘಟನೆಗಳನ್ನು ನೆನಪಿಸಿಕೊಳ್ಳುತ್ತಾರೆ, ಮಾತ್ರವಲ್ಲ ನಮ್ಮ ಬದುಕಿನಲ್ಲಿ ಇಂಥ ಕೆಲವು ಘಟನೆಗಳು ನಡೆಯಬಾರದು ಎಂದಾದರೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆಗಳೇನು ಎನ್ನುವ ಸಂದೇಶವೂ ಅನಿರೀಕ್ಷಿತ ಅತಿಥಿಗಳು ಚಿತ್ರದಲ್ಲಿದೆ ಎಂದರು.








## ಶಿವಣ್ಣ ಈಗ 'ಒರಿಜಿನಲ್ ಮಾನ್ ಸ್ಟಾರ್'

ನಿರ್ದೇಶಕ ಹಾಗೂ ನಿರ್ಮಾಪಕ ಆರ್ ಚಂದ್ರು ಈಗ ಬಾಲಿವುಡ್ ಗೆ ಅಡಿಯಿಟ್ಟಿದ್ದಾರೆ. ಆನಂದ್ ಪಂಡಿತ್ ಅವರೊಡಗೂಡಿ ಹೊಸ ಚಿತ್ರ ನಿರ್ಮಿಸಲು ಮುಂದಾಗಿದ್ದಾರೆ. ಕನ್ನಡ ಸೇರಿದಂತೆ ಹಲವು ಭಾಷೆಗಳಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ. ಕನ್ನಡದಲ್ಲಿ ಶಿವರಾಜಕುಮಾರ್ ಮತ್ತು ತೆಲುಗಿನಲ್ಲಿ ಸುನೀಲ್ ನಾಯಕರಾಗಿ ನಟಿಸುತ್ತಿದ್ದು, ಹಿಂದಿ, ತಮಿಳು ಹಾಗೂ ಮಲಯಾಳಂ ನಲ್ಲೂ ಸುಪ್ರಸಿದ್ದ ಸ್ಟಾರ್ ನಟರು ನಾಯಕರಾಗಿ ನಟಿಸುತ್ತಿದ್ದಾರೆ.
ಸಿನಿಮಾವನ್ನೇ ಉಸಿರಾಗಿಸಿಕೊಂಡಿರುವ ಆರ್ ಚಂದ್ರು "ಕಬ್ಜ" ನಂತರ ಹೊಸ ಚಿತ್ರ ನಿರ್ಮಾಣಕ್ಕೆ ಸಿದ್ದತೆ ನಡೆಸಿದ್ದಾರೆ.
ಶಿವರಾಜಕುಮಾರ್ ಪ್ರಮುಖ ಪಾತ್ರದಲ್ಲಿ ನಟಿಸುತ್ತಿರುವ ಈ ನೂತನ ಪ್ಯಾನ್ ಇಂಡಿಯಾ ಚಿತ್ರದ ಆರಂಭೋತ್ಸವವನ್ನು ಮುಂಬೈನಲ್ಲಿ ನಡೆಸಿದ್ದಾರೆ. ಈ ನೂತನ ಚಿತ್ರಕ್ಕೆ "ಒರಿಜಿನಲ್ ಮಾನ್ ಸ್ಟಾರ್" ಎಂಬ ಯುನಿವರ್ಸಲ್ ಟೈಟಲ್ ಇಡಲಾಗಿದ್ದು, ಎಲ್ಲಾ ಭಾಷೆಗೂ ಈ ಶೀರ್ಷಿಕೆ ಹೊಂದಿಕೆಯಾಗುತ್ತದೆ.
ಯಶ್, ರಿಷಭ್ ಶೆಟ್ಟಿ, ಪ್ರಶಾಂತ್ ನೀಲ್ ಹಾಗೂ ಆರ್ ಚಂದ್ರು ಅವರಂತಹ ಕನ್ನಡಿಗರು ಪ್ರಸ್ತುತ ಕನ್ನಡದ ಸಿನಿಮಾಗಳನ್ನು ಇಡೀ ವಿಶ್ವವೇ ತಿರುಗಿ ನೋಡುವ ಹಾಗೆ ಮಾಡುತ್ತಿದ್ದಾರೆ. ಇದು ನಿಜಕ್ಕೂ ಕನ್ನಡಿಗರು ಹೆಮ್ಮೆ ಪಡುವ ವಿಷಯ.
ಸದ್ಯ ಆರ್ ಚಂದ್ರು ನಿರ್ಮಾಣದ, ಡಾರ್ಲಿಂಗ್ ಕೃಷ್ಣ ಹಾಗೂ ಪ್ರಕಾಶ್ ರಾಜ್ ನಟನೆಯ "ಫಾದರ್" ಚಿತ್ರ ಸಹ ಬಿಡುಗಡೆ ಹಂತದಲ್ಲಿದ್ದು, ಇತ್ತೀಚೆಗೆ ಬಿಡುಗಡೆಯಾಗಿರುವ ಟೀಸರ್ ಗೆ ನಿರೀಕ್ಷೆಗೂ ಮೀರಿ ಮೆಚ್ಚುಗೆ ಸಿಗುತ್ತಿದೆ.

## ಈ ಬಾರಿಯ ಬಿಗ್‌ಬಾಸ್ ನನಗೆ ತುಂಬಾ ವಿಶೇಷ: ಸುದೀಪ್



ಬಹುನಿರೀಕ್ಷಿತ ಬಿಗ್‌ಬಾಸ್ ಕನ್ನಡದ ಹೊಸ ಸೀಸನ್ ಆರಂಭಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಬಿಗ್‌ಬಾಸ್ ಮನೆಗೆ ಯಾರೆಲ್ಲ ತೆರಳಲಿದ್ದಾರೆ ಎಂಬ ಕುತೂಹಲ ಹೆಚ್ಚಾಗಿದೆ, ಈ ಬಾರಿಯ ಬಿಗ್‌ಬಾಸ್ ಹಲವು ಕಾರಣಗಳಿಂದ ತಮಗೆ ಬಹಳ ವಿಶೇಷ ಎಂದು ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಹೇಳಿದ್ದಾರೆ.

ಸೆ.6ರಿಂದ ಬಿಗ್‌ಬಾಸ್ ಶೋ ಶುರುವಾಗಲಿರುವ ಹಿನ್ನೆಲೆಯಲ್ಲಿ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿನಿಮಾ ಚಿತ್ರೀಕರಣ ಮತ್ತು ಬಿಗ್‌ಬಾಸ್ ಶೋ ನಡುವಿನ ಸಮಯ ಹೊಂದಾಣಿಕೆಯ ಬಗ್ಗೆ ಸ್ವಾರಸ್ಯಕರ ಮಾಹಿತಿ ಹಂಚಿಕೊಂಡಿದ್ದಾರೆ.

ಹಿಂದಿನ ಸೀಸನ್‌ಗಳಲ್ಲಿ ವೀಕೆಂಡ್ ಶೂಟಿಂಗ್ ಮ್ಯಾನೇಜ್ ಮಾಡುವುದು ನನಗೆ ದೊಡ್ಡ ಸವಾಲಾಗಿತ್ತು. ಒಮ್ಮೆ ಮಹಾಬಲಿಪುರಂನಲ್ಲಿ ಶೂಟಿಂಗ್‌ನಲ್ಲಿದ್ದಾಗ ವೀಕೆಂಡ್‌ನಲ್ಲಿ ಬೆಂಗಳೂರಿಗೆ ಬಂದು ವಿಮಾನ ನಿಲ್ದಾಣದಿಂದ ಜೆ.ಪಿ. ನಗರಕ್ಕೆ ತಲುಪಿ, ನಂತರ ಬಿಗ್‌ಬಾಸ್ ಸೆಟ್‌ಗೆ ಹೋಗಬೇಕಿತ್ತು. ಆದರೆ ಈ ಬಾರಿ ಆ ತಲೆನೋವಿಲ್ಲ. ನನ್ನ ಬಹುನಿರೀಕ್ಷಿತ ಬಿಲ್ಲ ರಂಗ ಭಾಷಾ ಚಿತ್ರದ ಸೆಟ್ ಬಿಗ್‌ಬಾಸ್ ಸೆಟ್‌ಗೆ ಅತ್ಯಂತ ಸಮೀಪದಲ್ಲೇ ಇದೆ. ಕೇವಲ 15 ನಿಮಿಷದಲ್ಲೇ ಶೂಟಿಂಗ್ ಮುಗಿಸಿ ಬಿಗ್‌ಬಾಸ್ ವೇದಿಕೆಗೆ ಬರಬಹುದು ಎಂದು ಸುದೀಪ್ ವಿವರಿಸಿದರು.

ಇತ್ತೀಚೆಗೆ ಭಾರೀ ಚರ್ಚೆಗೆ ಒಳಗಾಗಿರುವ ಅಗ್ನಿಪರೀಕ್ಷೆ ಹಾಗೂ ಜಡ್ಜ್‌ಗಳ ಕಟುವರ್ತನೆ ಕುರಿತು ಮುಕ್ತವಾಗಿ ಮಾತನಾಡಿದ ಸುದೀಪ್, ಕೆಲವು ಅಗ್ನಿಪರೀಕ್ಷೆಗಳು ಮುಗಿದ ಮೇಲೆಯೇ ನಿಜವಾದ ಯಶಸ್ಸು ಅಥವಾ ಸ್ವರ್ಗ ಸಿಗುವುದು. ಶಾಲೆಯಲ್ಲಿ ಶಿಕ್ಷಕರು ತಪ್ಪು ಮಾಡಿದಾಗ ಗೆಟ್‌ಔಟ್ ಎನ್ನುತ್ತಾರೆ, ಆಕ್ಷಣಕ್ಕೆ ಅದು ನಮಗೆ ಕಹಿಯೆನಿಸಿದರೂ ಒಳ್ಳೆಯದಕ್ಕೇ ಆಗಿರುತ್ತದೆ. ಇಲ್ಲಿ ಜಡ್ಜ್‌ಗಳ ನಡವಳಿಕೆ ಎಷ್ಟು ಸರಿ-ತಪ್ಪು ಎಂದು ಚರ್ಚಿಸುವುದು ಮುಖ್ಯವಲ್ಲ. ಅಲ್ಲಿ ರಿಜೆಕ್ಟ್ ಆದವರಿಗೂ ಅದು ದೊಡ್ಡ ಹೈಪ್ ಮತ್ತು ಜನಪ್ರಿಯತೆ ತಂದುಕೊಟ್ಟಿರಬಹುದು. ಒಮ್ಮೆ ತಿರಸ್ಕೃತರಾದ ಮಾತ್ರಕ್ಕೆ ಬದುಕಿನ ಬಾಗಿಲುಗಳು ಮುಚ್ಚುವುದಿಲ್ಲ. ಅವಮಾನಗಳನ್ನು ಮೆಟ್ಟಿನಿಂತು ಬಂದವರಿಗೆ ಉತ್ತಮ ಮನರಂಜನೆ ನೀಡೋಣ ಎಂದು ಸ್ಪರ್ಧಿಗಳಿಗೆ ಧೈರ್ಯ ತುಂಬಿದರು.

## ಕಿಚ್ಚ ಸುದೀಪ್ ಹುಟ್ಟುಹಬ್ಬಕ್ಕೆ ದೇವರಾಯ ಶೀರ್ಷಿಕೆ ಬಿಡುಗಡೆ

ಕಿಚ್ಚ ಸುದೀಪ್ ಜನ್ಮದಿನದ ಸಂದರ್ಭದಲ್ಲಿ ಮಹತ್ವಾಕಾಂಕ್ಷೆಯ ಐತಿಹಾಸಿಕ ಪ್ರಾಜೆಕ್ಟ್ 'ದೇವರಾಯ' ಅಧಿಕೃತವಾಗಿ ಘೋಷಣೆಯಾಗಿದೆ. ಪೀಪಲ್ ಮೀಡಿಯಾ ಫ್ಯಾಕ್ಟರಿ ಹಾಗೂ ಪ್ರಿಯಾ ಸುದೀಪ್ ಅವರ ಸುಪ್ರಿಯಾನ್ವಿ ಪಿಕ್ಚರ್ ಸ್ಟುಡಿಯೋಸ್ ಜಂಟಿಯಾಗಿ ಈ ಚಿತ್ರ ನಿರ್ಮಿಸಲು ಮುಂದಾಗಿವೆ. ವಿಜಯನಗರ ಸಾಮ್ರಾಜ್ಯವನ್ನು ಸುವರ್ಣಯುಗಕ್ಕೆ ಕೊಂಡೊಯ್ದು, ಸಾಹಸ, ಚಾಣಾಕ್ಷ ಆಡಳಿತ ಹಾಗೂ ಸಾಹಿತ್ಯ-ಕಲೆಗಳ ಪೋಷಣೆಗೆ ಹೆಸರಾದ ಚಕ್ರವರ್ತಿ ಶ್ರೀಕೃಷ್ಣದೇವರಾಯರ ಪಾತ್ರದಲ್ಲಿ ನಟ ಸುದೀಪ್ ಅವರು ಕಾಣಿಸಿಕೊಳ್ಳಲಿದ್ದಾರೆ. ಈ ಹಿಂದೆ ಕನ್ನಡದ ಮೇರುನಟ ಡಾ.ರಾಜಕುಮಾರ್ ಅವರು ಕೃಷ್ಣದೇವರಾಯರ ಪಾತ್ರವನ್ನು ಬೆಳ್ಳಿತೆರೆಯ ಮೇಲೆ ಅಜರಾಮರಗೊಳಿಸಿದ್ದರು. ಹಲವಾರು ದಶಕಗಳ ಬಳಿಕ, ಅತ್ಯಾಧುನಿಕ ತಂತ್ರಜ್ಞಾನ ಮತ್ತು ಅದ್ದೂರಿ ಮೇಕಿಂಗ್‌ನೊಂದಿಗೆ ಮೂಡಿಬರಲಿರುವ ದೇವರಾಯ ಚಿತ್ರವು ಸುದೀಪ್ ಅವರ ಸಿನಿಪಯಣದಲ್ಲೇ ದೊಡ್ಡ ಮೈಲಿಗಲ್ಲಾಗುವ ಲಕ್ಷಣ ಹೊಂದಿದೆ. ಪ್ರಿಯಾಸುದೀಪ್ ಅರ್ಪಿಸುತ್ತಿರುವ ಈ ಚಿತ್ರ-ಕ್ಕೆ ಟಿ.ಜಿ.ವಿಶ್ವಪ್ರಸಾದ್ ಹಾಗೂ ಕೃತಿಪ್ರಸಾದ್ ಬಂಡವಾಳ ಹೂಡುತ್ತಿದ್ದಾರೆ. ಪ್ಯಾನ್‌ಇಂಡಿಯಾ ಮತ್ತು ಬಿಗ್‌ಬಜೆಟ್ ಚಿತ್ರಗಳನ್ನು ನಿರ್ಮಿಸಿರುವ ಪೀಪಲ್ ಮೀಡಿಯಾ ಫ್ಯಾಕ್ಟರಿ, ಇದೀಗ ಕನ್ನಡದಲ್ಲೂ ಭದ್ರವಾಗಿ ನೆಲೆವೂರಲು ಸಜ್ಜಾಗಿದೆ.

**ಡಾ.ರಾಜ್ ನಂತರ ಶ್ರೀಕೃಷ್ಣದೇವರಾಯನಾಗಿ ಸುದೀಪ್**




ಸದ್ಯ ಶೀರ್ಷಿಕೆ ಮತ್ತು ಪೋಸ್ಟರ್‌ನಿಂದ ಕುತೂಹಲ ಕೆರಳಿಸಿರುವ ಚಿತ್ರತಂಡ, ನಿರ್ದೇಶಕರಾರು ಎಂಬುದನ್ನು ಸದ್ಯಕ್ಕೆ ಗೌಪ್ಯವಾಗಿಟ್ಟಿದೆ.


## "ಬೃಂದಾವಿಹಾರಿ " ಮತ್ತ ಫ್ಯಾಮಿಲಿಮ್ಯಾನ್ ಆಗಿ ಗಣೇಶ್



ಕೃಷ್ಣಂ ಪ್ರಣಯಸಖಿಯ ಯಶಸ್ವೀ ಜೋಡಿ ಗೋಲ್ಡನ್‌ಸ್ಟಾರ್ ಗಣೇಶ್ ಮತ್ತು ಶ್ರೀನಿವಾಸರಾಜು ಬೃಂದಾವಿಹಾರಿ ಚಿತ್ರದ ಮೂಲಕ ಮತ್ತೊಮ್ಮೆ ಜೊತೆ-ಯಾಗಿದ್ದಾರೆ. ಶಾಸಕರು ಹಾಗೂ ನಿರ್ಮಾಪಕ ಸಮೃದ್ಧಿ ವಿ.ಮಂಜುನಾಥ್ ಅವರ ನಿರ್ಮಾಣದ ಈಚಿತ್ರ ಅ.16ರಂದು ದಸರಾ ಕೊಡುಗೆಯಾಗಿ ಬಿಡುಗಡೆಯಾಗಲಿದೆ.

ಇತ್ತೀಚೆಗೆ ನಡೆದ ಪತ್ರಿಕಾಗೋಷ್ಟಿಯಲ್ಲಿ ಮಾತನಾಡಿದ ಗಣೇಶ್, ಚಿತ್ರದಲ್ಲಿ ಭಾವನೆಗೆ ಬೆಲೆ ಕೊಡುವ ಮಾಧವ ಎಂಬ ಮುಗ್ಧ ಯುವಕನ ಪಾತ್ರದಲ್ಲಿ ನಾನು ಕಾಣಿಸಿಕೊಂಡಿದ್ದೇನೆ. ಎಮೋಷನ್, ಕಾಮಿಡಿ ಜತೆ ಸಂಬಂಧಗಳನ್ನು ಒಟ್ಟಿಗೆ ಕಟ್ಟಿಕೊಡುವುದು ಸವಾಲಿನ ಕೆಲಸವಾಗಿತ್ತು. ನಿರ್ದೇಶಕರು ನಮ್ಮೆಲ್ಲರಿಂದಲೂ ಒಳ್ಳೆಯ ಕೆಲಸ ತೆಗೆಸಿದ್ದಾರೆ. ಇದು ನಿಮ್ಮ ಗಣೇಶನ ಅಪ್ಪಟ್ಟ ಕನ್ನಡ ಸಿನಿಮಾ ಎಂದರು. ನಿರ್ದೇಶಕ ಶ್ರೀನಿವಾಸರಾಜು ಮಾತನಾಡಿ ಈ ಚಿತ್ರದ ನಂತರ ನಾನು ಮತ್ತೆ ಗಣೇಶ್‌ಜೊತೆ ಸಿನಿಮಾ ಮಾಡದಿದ್ದರೂ ಪರವಾಗಿಲ್ಲ. ಅಷ್ಟು ತೃಪ್ತಿ ನನಗೀ ಚಿತ್ರದಿಂದ ಸಿಕ್ಕಿದೆ. ಗಣೇಶ್ ಅದ್ಭುತವಾಗಿ ನಟಿಸಿದ್ದಾರೆ. ಕೇಳಿದ್ದೆಲ್ಲವನ್ನೂ ಕೊಟ್ಟು ಯಾವುದೇ ಕೊರತೆಬಾರದಂತೆ ನೋಡಿಕೊಂಡಿರುವ ನಿರ್ಮಾಪಕರಿಗೆ, ನಮ್ಮ ತಂತ್ರಜ್ಞರು ಹಾಗೂ ಕಲಾವಿದರಿಗೆ ಧನ್ಯವಾದ ಎಂದರು. ನಿರ್ಮಾಪಕ ಸಮೃದ್ಧಿ ಮಂಜುನಾಥ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಜನ ಹೆಚ್ಚು ಫ್ಯಾಮಿಲಿ ಸಿನಿಮಾಗಳನ್ನು ಇಷ್ಟಪಡುತ್ತಿದ್ದಾರೆ,

## ಡ್ರ್ಯಾಗನ್' ಸಿನಿಮಾದಲ್ಲಿ ಎನ್‌ಟಿಆರ್ ಜೊತೆ ಶಾಹಿದ್ ಕಪೂರ್, ಆಲಿಯಾ ಭಟ್?



ಜೂನಿಯರ್ ಎನ್‌ಟಿಆರ್ ಹಾಗೂ ನಿರ್ದೇಶಕ ಪ್ರಶಾಂತ್ ನೀಲ್ ಕಾಂಬಿನೇಷನ್‌ನಲ್ಲಿ ಮೂಡಿಬರುತ್ತಿರುವ ಬಹುನಿರೀಕ್ಷಿತ ಪ್ಯಾನ್ ಇಂಡಿಯಾ ಸಿನಿಮಾ 'ಡ್ರ್ಯಾಗನ್' ಸದ್ಯ ಭಾರತೀಯ ಚಿತ್ರರಂಗದಲ್ಲಿ ಭಾರೀ ಕುತೂಹಲ ಮೂಡಿಸಿರುವ ಚಿತ್ರಗಳ ಪೈಕಿ ಒಂದಾಗಿದೆ. ಚಿತ್ರದ ಪ್ರತಿಯೊಂದು ಅಪ್‌ಡೇಟ್ ಕೂಡ ಅಭಿಮಾನಿಗಳಲ್ಲಿ ನಿರೀಕ್ಷೆಯನ್ನು ಹೆಚ್ಚಿಸುತ್ತಿದೆ. ಈಗಾಗಲೇ ಬಾಲಿವುಡ್‌ನ ಹಿರಿಯ ನಟ ಅನಿಲ್ ಕಪೂರ್ ಚಿತ್ರತಂಡ-ಕ್ಕೆ ಸೇರ್ಪಡೆಯಾಗಿರುವುದು 'ಡ್ರ್ಯಾಗನ್'ಗೆ ಮತ್ತಷ್ಟು ತಾರಾ ಮೆರುಗು ತಂದಿದೆ. ಇದರ ಬೆನ್ನಲ್ಲೇ ಬಾಲಿವುಡ್‌ನ ಸ್ಟಾರ್ ನಟರಾದ ಆಲಿಯಾ ಭಟ್ ಮತ್ತು ಶಾಹಿದ್ ಕಪೂರ್ ಕೂಡ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ನಿರ್ಮಾಪಕರ ಕಡೆಯಿಂದ ಈ ಬಗ್ಗೆ ಇನ್ನೂ ಅಧಿಕೃತ ಘೋಷಣೆ ಹೊರಬಂದಿಲ್ಲ. ಆದರೆ ಚಿತ್ರರಂಗದ ಮೂಲಗಳ ಪ್ರಕಾರ, ಆಲಿಯಾ ಭಟ್ ಮತ್ತು ಶಾಹಿದ್ ಕಪೂರ್ ಇಬ್ಬರೂ 'ಡ್ರ್ಯಾಗನ್' ತಂಡವನ್ನು ಸೇರಿಕೊಂಡಿದ್ದಾರೆ ಎನ್ನಲಾಗುತ್ತಿದೆ. ಆಲಿಯಾ ಭಟ್ ಈಗಾಗಲೇ ಬಾಲಿವುಡ್ ಮಾತ್ರವಲ್ಲದೆ ದೇಶಾದ್ಯಂತ ದೊಡ್ಡ ಅಭಿಮಾನಿ ಬಳಗ ಹೊಂದಿರುವ ನಟಿ. ಅವರಂತಹ ಜನಪ್ರಿಯ ನಟಿ ಜೂನಿಯರ್ ಎನ್‌ಟಿಆರ್ ಜೊತೆ ತೆರೆ ಹಂಚಿಕೊಳ್ಳುತ್ತಿರುವುದು ಚಿತ್ರದ ಪ್ಯಾನ್ ಇಂಡಿಯಾ ವ್ಯಾಪ್ತಿಗೆ ಮತ್ತಷ್ಟು ಬಲ ನೀಡುವ ಸಾಧ್ಯತೆಯಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.